MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER


ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 63 | ಬುಧವಾರ : 24-12-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 63 | WEDNESDAY : 24-12-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00


## ಸರ್ಕಾರಿ ಬಾಲಮಂದಿರ, ದತ್ತು ಸ್ವೀಕಾರ ಕೇಂದ್ರ ವಿವಿಧೆಡೆ ಜಿಲ್ಲಾಧಿಕಾರಿಗಳಿಂದ ದಿಢೀರ್ ಭೇಟಿ; ಪರಿಶೀಲನೆ





ಯುವಮಾರ್ಗ ಸುದ್ದಿ

**ರಾಯಚೂರು ಡಿ,23–** ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಡಿಸೆಂಬರ್ 22ರಂದು ನಗರದ ಸರ್ಕಾರಿ ದತ್ತು ಸ್ವೀಕಾರ ಕೇಂದ್ರ, ಸರ್ಕಾರಿ ವೀಕ್ಷಣಾಲಯ, ಸರ್ಕಾರಿ ಬಾಲಕಿಯರ ಬಾಲಮಂದಿರ ಹಾಗೂ ಬಾಲಕರ ಬಾಲ ಮಂದಿರ ಸೇರಿದಂತೆ ವಿವಿಧೆಡೆ ದಿಢೀರ್ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಯನ್ನು ಖುದ್ದು ಪರಿಶೀಲಿಸಿದರು. ಮೊದಲಿಗೆ ನಗರದ ಸರ್ಕಾರಿ ದತ್ತು ಸ್ವೀಕಾರ ಕೇಂದ್ರಕ್ಕೆ ಭೇಟಿ ನೀಡಿದ ಅವರು, ಸಂಸ್ಥೆಯಲ್ಲಿನ ಮಕ್ಕಳ ಸುರಕ್ಷತೆ, ಆರೋಗ್ಯ ಮತ್ತು ಮೂಲಭೂತ ಸೌಲಭ್ಯಗಳ ಕುರಿತು ಪರಿಶೀಲಿಸಿದರು. ಸಂಸ್ಥೆಯಲ್ಲಿನ ಮಕ್ಕಳಿಗೆ ಕಾಲಕಾಲಕ್ಕೆ ಲಸಿಕೆ ಹಾಕಿಸಬೇಕು. ಗುಣಮಟ್ಟದ ಆಹಾರ ವಿತರಣೆ ಮಾಡಬೇಕು. ಮಕ್ಕಳ ಸುರಕ್ಷತೆ ಬಗ್ಗೆ ಜಾಗೃತೆ ವಹಿಸಬೇಕು ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ನಂತರ ಸರ್ಕಾರಿ ವೀಕ್ಷಣಾಲಯಕ್ಕೆ ಭೇಟಿ ನೀಡಿ, ಅಲ್ಲಿನ ಅಡುಗೆ ಮನೆ, ಮಕ್ಕಳ ವಾಸದ ಕೋಣೆ, ಶೌಚಗೃಹಗಳನ್ನು ವೀಕ್ಷಿಸಿ ಶುಚಿತ್ವ ಮತ್ತು ಮೂಲಭೂತ ಸೌಕರ್ಯದ ಬಗ್ಗೆ ಗಮನ ಹರಿಸಲು ಸೂಚನೆಗಳನ್ನು ನೀಡಿದರು. ಇದೆ ವೇಳೆ, ಜಿಲ್ಲಾಧಿಕಾರಿಗಳು, ಕಾನೂನು ಸಂಘರ್ಷಕ್ಕೆ ಒಳಗಾದ(**2ನೇ ಪುಟಕ್ಕೆ**>>>)

## ಎಇಇ ಬಿ.ವಿಜಯಲಕ್ಷ್ಮಿ ಮನೆ ಮೇಲೆ ಲೋಕಾಯುಕ್ತರು ದಾಳಿ

ಯುವಮಾರ್ಗ ಸುದ್ದಿ




**ಸಿಂಧನೂರು,ಡಿ.23–** ಜಿಲ್ಲೆಯ ಸಿಂಧನೂರು ಉಪ ವಿಭಾಗದ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯ ಎಇಇ ಡಿ.ವಿಜಯಲಕ್ಷ್ಮಿ ಮನೆ ಸೇರಿದಂತೆ ಒಟ್ಟು 5 ಕಡೆಗೆ ಲೋಕಾಯುಕ್ತ ಅಧಿಕಾರಿಗಳು ಮಂಗಳವಾರ ದಾಳಿ ನಡೆಸಿದ್ದಾರೆ.

ಆದಾಯಕ್ಕಿಂತ ಅಧಿಕ ಆಸ್ತಿ ಸಂಪಾದನೆ ದೂರಿನ ಮೇರೆಗೆ ದಾಳಿ ಮಾಡಲಾಗಿದೆ.ರಾಯಚೂರಿನ ಗಂಗಾಪರಮೇಶ್ವರ ಲೇಔಟ್ ನಲ್ಲಿ ನಾಲ್ಕಂತಸ್ತಿನ ಮನೆ ಮತ್ತು ಪಕ್ಕದಲ್ಲೇ ಇರುವ ಇನ್ನೊಂದು ಮನೆಯಲ್ಲಿ ದಾಖಲೆಗಳ ಶೋಧ ಕಾರ್ಯಚರಣೆ ನಡೆಸಲಾಗುತ್ತಿದೆ.

ಅದರ ಜೊತೆಗೆ ಸಿಂಧನೂರು ಕಚೇರಿ, ಯಾದಗಿರಿ ತೋಟದ ಮನೆ, ಜೋಳದಡಗಿಯಲ್ಲಿರುವ ಅವರ ತಂಗಿ ಮನೆಯ ಮೇಲೆಯೂ ದಾಳಿ ನಡೆಸಲಾಗಿದೆ. ಯಾದಗಿರಿಯಲ್ಲಿ 30 ಎಕರೆ ಜಮೀನು, ಹಾಗೂ ಲೆಔಟ್ ಗಳು, ಚಂದ್ರಬಂಡಾ ಬಳಿ ಜಮೀನು, ಸೇರಿದಂತೆ ಸಾಕಷ್ಟು ಕಡೆ ಆಸ್ತಿ ಸಂಪಾದನೆ ಮಾಡಿರುವ ಮಾಹಿತಿಗಳು ಲಭ್ಯವಾಗಿದೆ. ರಾಯಚೂರು, ಕೊಪ್ಪಳ, ಹಾಗೂ ಬಳ್ಳಾರಿ ಜಿಲ್ಲೆ ಲೋಕಾಯುಕ್ತ ಪೊಲೀಸರು 5 ತಂಡಗಳು ರಚಿಸಿ ದಾಳಿ ಮಾಡಿದ್ದಾರೆ. ಇನ್ನೂ ಒಂದೂವರೆ ವರ್ಷ ಮಾತ್ರ ಸೇವಾವಧಿ ಬಾಕಿ ಇತ್ತು. ಇವರು ರಾಯಚೂರು ಮತ್ತು ಸಿಂಧನೂರಿನಲ್ಲಿಯೇ ಹೆಚ್ಚು ಕಾಲ ಸೇವೆ ಸಲ್ಲಿಸಿದ್ದರು ಎಂಬ ಮಾಹಿತಿಯು ಇದೆ.

## ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಜಾನೆಕಲ್ ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ದಲಿತಪರ ಸಂಘಟನೆಗಳಿಂದ ಪ್ರತಿಭಟನೆ

ಯುವಮಾರ್ಗ ಸುದ್ದಿ




**ಮಾನ್ವಿ,ಡಿ.23–** ಪಟ್ಟಣದ ತಾಲೂಕು ಪಂಚಾಯಿತಿ ಆವರಣದಲ್ಲಿ ತಾಲೂಕಿನ ಜಾನೆಕಲ್ ಗ್ರಾಮ ಪಂಚಾಯಿತಿ ಚುನಾಯಿತ ಪ್ರತಿನಿಧಿಗಳು ಹಾಗೂ ವಿವಿಧ ದಲಿತಪರ ಸಂಘಟನೆಗಳಿಂದ ನಡೆದ ಪ್ರತಿಭಟನೆ ಧರಣಿಯಲ್ಲಿ ಗವಿಗಟ್ಟ ಗ್ರಾ.ಪಂ.ಸದಸ್ಯ ದೇವೇಂದ್ರಪ್ಪ ಮಾತನಾಡಿ ಜಾನೆಕಲ್ ಗ್ರಾಮಪಂಚಾಯಿತಿಯಲ್ಲಿ 15 ನೇ ಹಣಕಾಸು ಯೋಜನೆಯ ಅನು ದಾನದಲ್ಲಿ ಕೈಗೊಳ್ಳಲಾದ ಕಾಮಗಾರಿಗಳ ಪರಿಶೀಲನೆ ನಡೆಸಬೇಕು, ಗ್ರಾ.ಪಂ. ವತಿಯಿಂದ ಸಂಗ್ರಹಿಸಲಾದ ತೆರಿಗೆ ಹಣದ ಮಾಹಿತಿ ನೀಡಬೇಕು,ಬಸವ ವಸತಿ,ಅಂಬೇಡ್ಕರ್ ವಸತಿ ಯೋಜನೆಯಡಿಯಲ್ಲಿ ಮಂಜೂರಾದ ಮನೆಗಳನ್ನು ಗ್ರಾಮ ಸಭೆ ಮೂಲಕ ಹಂಚಿಕೆ ಮಾಡಬೇಕು, ಈ ಸ್ವತ್ತು ಯೋಜನೆಯಡಿಯಲ್ಲಿ ಆಸ್ತಿ ಮಾಲಿಕರಿಗೆ ಖಾತಾ ಉತಾರ ಪ್ರಮಾಣ ಪತ್ರಗಳನ್ನು ನೀಡುವಲ್ಲಿ ವಿನಾಕರಣ ವಿಳಂಬ ಮಾಡುವ ಸಿಬ್ಬಂದಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು ,ಗವಿಗಟ್ಟ ಗ್ರಾಮದಲ್ಲಿ ಶಕ್ತಿ ಭವನ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು,ಹಾಗೂ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಬೇಕು, ಗ್ರಾಮದ ಶಾಲೆಯಲ್ಲಿ ಕೈಗೊಳ್ಳಲಾದ ಮಳೆನೀರು ಕೋಯ್ಲು ಕಾಮಗಾರಿ, ಮರಂ ರಸ್ತೆ ಕಾಮಗಾರಿಯ ಬಾಕಿ ಇರುವ ಬಿಲ್ ಪಾವತಿ ಮಾಡಬೇಕು,ನರೇಗಾ ಕೂಲಿ ಕಾರ್ಮಿಕರಿಗೆ ಸಮರ್ಪಕವಾಗಿ ಕೂಲಿ ಕೆಲಸವನ್ನು ನೀಡದೆ ಇರುವ ಗ್ರಾ.ಪಂ. ಅಭಿವೃದ್ಧಿ ಅಧಿಕಾರಿಯ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು. ಎಂದು ಒತ್ತಾಯಿಸಿದರು.

ಗ್ರಾಮ ಪಂಚಾಯಿತಿ ಸದಸ್ಯರಾದ ಜೆ.ರಮೇಶ ನಾಯಕ ಗವಿಗಟ್ಟ , ದಲಿತ ಸೇನೆ ತಾ.ಅಧ್ಯಕ್ಷರಾದ ರಮೇಶ ಕರೆಗುಡ್ಡ,ಗೌ.ಅಧ್ಯಕ್ಷರಾದ ಕರಿಯಪ್ಪ ನಕ್ಕುಂದಿ, ಭೀಮರಾಯ, ಮುತ್ತಣ್ಣ, ಹುಸೇನಪ್ಪ,ಮಾರೇಶ, ಬಿ.ಅಮರೇಶನಾಯಕ,ಮಾರೇಶ ಬಂಡಾರಿ, ಬಡಕಪ್ಪ,ನಾಗರಾಜ, ಶಾಂತ ಕುಮಾರ, ಚನ್ನಪ್ಪ ಗೌಡ, ಮೌನೇಶ, ಮರಿಸ್ವಾಮಿ,ಸುಧಾಕರ ಅರೋಲಿ, ಸೇರಿದಂತೆ ಇನ್ನಿತರರು ಇದ್ದರು.

## ದೇವದುರ್ಗದಲ್ಲಿ ವಂದೇ ಮಾತರಂ ಗೀತೆಯ 150ನೇ ವರ್ಷಾಚರಣೆಯ ಛಾಯಚಿತ್ರ ಪ್ರದರ್ಶನ

ಯುವಮಾರ್ಗ ಸುದ್ದಿ




**ರಾಯಚೂರು ಡಿ,23–**ಕೇಂದ್ರ ಸಂವಹನ ಇಲಾಖೆ ಬಳ್ಳಾರಿ, ಭಾರತ ಸರ್ಕಾರದ ವಾರ್ತಾ ಮತ್ತು ಪ್ರಸಾರ ಸಚಿವಾಲಯ ಹಾಗೂ ದೇವದುರ್ಗ ಜ್ಞಾನ ಜ್ಯೋತಿ ಪದವಿ ಪೂರ್ವ ಕಾಲೇಜು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ದೇವದುರ್ಗ ತಾಲೂಕಾಡಳಿತ, ತಾಲ್ಲೂಕು ಪಂಚಾಯತ್, ಆರೋಗ್ಯ ಇಲಾಖೆ, ಪುರಸಭೆ ಇವರ ಆಶ್ರಯದಲ್ಲಿ ವಂದೇ ಮಾತರಂ ಗೀತೆಯ 150ನೇ ವರ್ಷಾಚರಣೆ ವಿಕಸಿತ ಭಾರತ–2047 ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಗಳ ಕುರಿತು ಛಾಯಚಿತ್ರ ಪ್ರದರ್ಶನ ಕಾರ್ಯಕ್ರಮವು ಡಿಸೆಂಬರ್ 23ರಂದು ನಡೆಯಿತು.

ದೇವದುರ್ಗ ಪಟ್ಟಣದ ಖೇಣೇದ ಫಂಕ್ಷನ್ ಹಾಲ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿದ್ದ ದೇವದುರ್ಗದ ಉಪ ತಹಸೀಲ್ದಾರ ಭೀಮರಾವ್ ಮೇಟಿ ಅವರು ಮಾತನಾಡಿ, ಸ್ವಾತಂತ್ರ ಹೋರಾಟದಲ್ಲಿ ವಂದೇ ಮಾತರಂ ಗೀತೆಯು ಮಹತ್ವದ ಕೊಡುಗೆ ನೀಡಿ, ರಾಷ್ಟ್ರದ ಏಕತೆ ಸಾಧಿಸಲು ಅವಕಾಶ ನೀಡಿತು ಎಂದರು.

ಈ ವೇಳೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಣ ಅಧಿಕಾರಿಗಳಾದ ಬಸವರಾಜ್ ಹಟ್ಟಿ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಭಾರತದ ಸಂವಿಧಾನ ಮತ್ತು ಭಾರತೀಯರ ಒಗ್ಗಟ್ಟು ವಸಹತುಶಾಹಿ, ಪಟ್ಟಭದ್ರ ಆಡಳಿಕ್ಕೆ ಅವಕಾಶ ನೀಡದೆ, ನಾವೆಲ್ಲರೂ ಒಂದೇ ಎನ್ನುವ ಭಾವನೆಯನ್ನು ವಂದೇ ಮಾತರಂ ಮೂಡಿಸುತ್ತಿದೆ ಮತ್ತು ಏಕತೆಯನ್ನು ಸಾಧಿಸಲು ಅನುಕೂಲವಾಗಿದೆ ಎಂದು ತಿಳಿಸಿದರು.

## ಅಕ್ರಮ ಗಣಿಗಾರಿಕೆ ತಡೆಯುವಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆ ಸಂಪೂರ್ಣ ವಿಫಲ: ಗುರುರಾಜ ನಾಗ್ಲಾಪುರ




ಯುವಮಾರ್ಗ ಸುದ್ದಿ

**ಮಾನ್ವಿ,ಡಿ.23–** ಪಟ್ಟಣದ ಪತ್ರಿಕಾ ಭವನದಲ್ಲಿ ಸಮಾಜಿಕ ಕಾರ್ಯಕರ್ತ ಗುರುರಾಜ ನಾಗ್ಲಾಪುರ ಮಾತನಾಡಿ ತಾಲೂಕಿನ ನೀರಮಾನ್ವಿ ಗ್ರಾಮದ ವ್ಯಾಪ್ತಿಯಲ್ಲಿ ಕೃಷಿ ಜಮೀನಿನಲ್ಲಿ ನಿಯಮಗಳಿಗೆ ವಿರುದ್ಧವಾಗಿ ರಾಯಚೂರು ನಿಂದ ಸಿಂಧನೂರು ವರೆಗೆ ನಡೆಯುತ್ತಿರುವ ಚತುಷ್ಪತ ರಸ್ತೆ ನಿರ್ಮಾಣ ಕಮಾಗಾರಿಗೆ ಅಗತ್ಯವಿರುವ ಜಲ್ಲಿಗಾಗಿ ಸುಚಿತಾ ಮಿಲೇನಿಯಂ ಪ್ರಾಜ್‌ಕ್ಟ್ ಕ್ರಷರ್ ಘಟಕವು ನಿಯಮಗಳನ್ನು ಉಲ್ಲಂಘಿಸಿ ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿರುವ ಬಗ್ಗೆ ಹಿರಿಯ ಭೂಮಿಜ್ಞಾನ ಇಲಾಖೆಯ ಅಧಿಕಾರಿಗಳಿಗೆ ದೂರು ಸಲ್ಲಿಸಿದ ನಂತರ ಸರ್ಕಾರವು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಮೂಲಕ ಒಂದು ಕೋಟಿ.ಎಂಬತ್ತೇಂಟು ಲಕ್ಷ ದಂಡವನ್ನು ವಿಧಿಸಿದ್ದು ಜಿಲ್ಲೆಯ ಹಿರಿಯ ಭೂವಿಜ್ಞಾನಿ ಆಧಿಕಾರಿ ಮುತ್ತಪ್ಪ ಸೇರಿದಂತೆ ಇತರ ಅಧಿಕಾರಿಗಳು ಕೇವಲ 32 ಲಕ್ಷ ಮಾತ್ರ ವಸೂಲಿ ಮಾಡಿದು ಉಳಿದ ದಂಡವನ್ನು ವಸೂಲಿ ಮಾಡುವಲ್ಲಿ ಜಿಲ್ಲಾ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿ ಮುತ್ತಪ್ಪ ಹಾಗೂ ಸಂಬಂಧಿತ (**2ನೇ ಪುಟಕ್ಕೆ**>>>)

## ಮಾನವಿ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟ ನೂತನ ಅಧ್ಯಕ್ಷರಾಗಿ ರಾಜಾ ಸುಭಾಷ ಚಂದ್ರ ನಾಯಕ ಆಯ್ಕೆ



ಯುವಮಾರ್ಗ ಸುದ್ದಿ

**ಮಾನ್ವಿ,ಡಿ.23–** ನಗರದ ಧ್ಯಾನ ಮಂದಿರದಲ್ಲಿ ಮಾನ್ವಿ ತಾಲೂಕ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಲಾಯಿತು.

ಗೌರವಾಧ್ಯಕ್ಷರಾಗಿ ಕಲ್ಮಠದ ವಿರೂಪಾಕ್ಷ ಪಂಡಿತರಾಧ್ಯ ಮಹಾಸ್ವಾಮಿಗಳು, ಅಧ್ಯಕ್ಷರಾಗಿ ರಾಜಾ ಸುಭಾಷ್ ಚಂದ್ರ ನಾಯಕ, ಪ್ರಧಾನ ಕಾರ್ಯದರ್ಶಿ ಯಾಗಿ ರಾಜು ತಾಳಿಕೋಟಿ, ಸಹ ಕಾರ್ಯದರ್ಶಿ ಯಾಗಿ ಅಖಿಲೇಶ್ ಕುರ್ಡಿ, ಖಜಾಂಚಿ ಯಾಗಿ ಶರಣಬಸವ, ಉಪಾಧ್ಯಕ್ಷರಾಗಿ ಭೀಮರಾಯ ಸಿತಿಮನಿ, ಶಶಿಕಲಾ ಪಾಟೀಲ್, ಎಂ.ಎ.ಎಚ್. ಮುಖಿಮ್, ಸಂಘಟನಾ ಕಾರ್ಯದರ್ಶಿ ಯಾಗಿ ಸಂದೀಪ್ ಅವರನ್ನು ನೇಮಕ ಮಾಡಲಾಯಿತು.

## ಮಸ್ಕಿ ತಾಲೂಕಿನ ಹಾಲಾಪುರ ಗ್ರಾಪಂ ವಿಭಜಿಸಿ, ಹೊಸ ಗ್ರಾಪಂ ರಚಿಸುವಂತೆ ಗ್ರಾಮಸ್ಥರ ಒತ್ತಾಯ



ಯುವಮಾರ್ಗ ಸುದ್ದಿ

**ಮಸ್ಕಿ,ಡಿ.23–**ಮಸ್ಕಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹಾಲಾಪುರ ಗ್ರಾಮ ಪಂಚಾಯತಿ ತಾಲೂಕಿನಲ್ಲಿಯೇ ಅತಿದೊಡ್ಡ ಗ್ರಾಪಂ ಆಗಿದೆ ಅದಕ್ಕೆ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿದ್ದು ಆದ್ದರಿಂದ ಹಾಲಾಪುರು ಗ್ರಾಪಂ ವಿಭಜಿಸಿ, ಹೊಸ ಗ್ರಾಪಂ ರಚಿಸಿ ಇಲ್ಲದಿದ್ದರೆ ಮುಂಬರುವ ಚುನಾವಣೆಗಳನ್ನು ಬಹಿಷ್ಕರಿತ್ತೇವೆ ಎಂದು ಗ್ರಾಮಸ್ಥರು ಒತ್ತಾಯಿಸಿದರು.

ಮಸ್ಕಿ ಪಟ್ಟಣದ ತಾಲೂಕು ಪಂಚಾಯತ್ ಕಚೇರಿಯಲ್ಲಿ ತಾಪಂ ಇಒ ಅಮರೇಶ ಯಾದವ ಅವರಿಗೆ ಮಂಗಳವಾರ ಮನವಿ ಪತ್ರ ಸಲ್ಲಿಸಿದರು

ಮಸ್ಕಿ ತಾಲೂಕಿನ ಹಾಲಾಪುರ ಗ್ರಾಮ ಪಂಚಾಯತಿಯು ಒಟ್ಟು 26 ಸದಸರನ್ನು ಒಳಗೊಂಡಿದ್ದು, 16 ಗ್ರಾಮ, ಕ್ಯಾಂಪಗಳನ್ನು , ಅಂದಾಜು 18000 ಸಾವಿರ ಜನಸಂಖ್ಯೆಯನ್ನು ಹೊಂದಿದ್ದು .ಭೌಗೋಳಿಕವಾಗಿ ವಿಶಾಲವಾಗಿರುತ್ತದೆ.ಕೆಲವು ಗ್ರಾಮಗಳಿಗೆ ಬಸ್ ಸೌಕರ್ಯ ಇರುವುದಿಲ್ಲ,ಗ್ರಾಮ ಪಂಚಾಯತಿ ಕೆಲಸ ಕಾರ್ಯಗಳಿಗೆ ತುಂಬಾ ತೊಂದರೆಯಾಗಿರುತ್ತದೆ.ಆಡಳಿತಾತ್ಮಕ ಹಿತದೃಷ್ಟಿಯಿಂದ ಹಾಲಾಪೂರ ಗ್ರಾಪಂ ಯನ್ನು ವಿಭಜಿಸಿ ಹೊಸ ಗ್ರಾಪಂ ಮಾಡಲು ಅವಶ್ಯಕತೆ ಇದೆ ಅದುಕೊಸ್ಕರ ಮಾಡಬೇಕು ಇಲ್ಲವಾದರೆ ಮುಂಬರುವ ಚುನಾವಣೆಯನ್ನು ಬಹಿಷ್ಕಾರ ಮಾಡಲಾಗುವುದು, ಈ ಬಗ್ಗೆ ತುಗ್ಗಲದಿನ್ನಿ,ಶಂಕರನಗರಕ್ಯಾಂಪ, ಹಿರೆಕಡಬೂರು,ಹಂಚಿನಾಳ, (**2ನೇ ಪುಟಕ್ಕೆ**>>>)

## ಬೀದಿ ವ್ಯಾಪಾರಿಗಳಿಗೆ ವಿಶೇಷ ಮೈಕ್ರೋ ಕ್ರೆಡಿಟ್ ಯೋಜನೆ ಸಾಲ ಮೇಳ




ಯುವಮಾರ್ಗ ಸುದ್ದಿ

**ರಾಯಚೂರು ಡಿ,23–** ರಾಯಚೂರು ಮಹಾನಗರ ಪಾಲಿಕೆಯಿಂದ ಲೀಡ್ ಬ್ಯಾಂಕ್ ಹಾಗೂ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಅವರ ಸಹಯೋಗದೊಂದಿಗೆ ಪಿಎಂ ಬೀದಿ ಮಾರಾಟಗಾರರ ಸ್ವಾವಲಂಬಿ ನಿಧಿ (ಪಿಎಂ ಸ್ವನಿಧಿ) ಬೀದಿ ವ್ಯಾಪಾರಿಗಳಿಗೆ ವಿಶೇಷ ಮೈಕ್ರೋ ಕ್ರೆಡಿಟ್ ಯೋಜನೆಯಡಿ ಸಾಲ ಮೇಳವು ಡಿಸೆಂಬರ್ 23ರಂದು ಯಶಸ್ವಿಯಾಗಿ ನಡೆಯಿತು. ರಾಯಚೂರು ಮಹಾನಗರ ಪಾಲಿಕೆಯ ಅಧಿಕಾರಿಗಳು, ಲೀಡ್ ಬ್ಯಾಂಕ್ ಹಾಗೂ ಎಸ್‌ಬಿಐ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು, ಸರ್ಕಾರದ ಕಲ್ಯಾಣ ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳುವಂತೆ ಬೀದಿ ವ್ಯಾಪಾರಿಗಳಿಗೆ ಪ್ರೋತ್ಸಾಹಿಸಿದರು. (**2ನೇ ಪುಟಕ್ಕೆ**>>>)

## ಮೊದಲನೇಯ ಪುಟದಿಂದ

# ಬೀದಿ ವ್ಯಾಪಾರಿಗಳಿಗೆ ವಿಶೇಷ ಮೈಕ್ರೋ ಕ್ರೆಡಿಟ್ ಯೋಜನೆ ಸಾಲ ಮೇಳ

ಸರ್ಕಾರದ ಮಹತ್ವದ ಯೋಜನೆಯ ಬಗ್ಗೆ ರಾಯಚೂರು ಜನತೆಗೆ ಅರಿವು ಮೂಡಿಸಲು ನಗರದ ಎಸ್‌ಬಿಐ ಕೇಂದ್ರ ಬ್ಯಾಂಕ್‌ನಲ್ಲಿ ಸಂಘಟಿಸಿದ್ದ ಕಾರ್ಯಕ್ರಮದಲ್ಲಿ 200ಕ್ಕೂ ಹೆಚ್ಚು ಬೀದಿ ಬದಿ ವ್ಯಾಪಾರಿಗಳು ಹಾಗೂ ಸಣ್ಣ ವ್ಯಾಪಾರಿಗಳು ಸೇರಿದ್ದರು.

ಈ ವೇಳೆ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಮಾತನಾಡಿ,

ಸ್ವಾವಲಂಬಿ ಜೀವನೋಪಾಯಕ್ಕೆ ಅಗತ್ಯವಾದ ಆರ್ಥಿಕ ಸಹಾಯ ಒದಗಿಸುವ ಉದ್ದೇಶದೊಂದಿಗೆ ಹಮ್ಮಿಕೊಂಡ ಈ ಮೇಳಕ್ಕೆ ಬೆಳಿಗ್ಗೆಯಿಂದಲೇ ಉತ್ತಮ ಸ್ಪಂದನೆ ದೊರೆತಿದ್ದು, ಈ ಮೇಳದಿಂದ ನಮ್ಮಲ್ಲಿ ಉತ್ಸಾಹ ಮೂಡಿದೆ. ರಾಯಚೂರು ಮಹಾನಗರ ಪಾಲಿಕೆಯಿಂದ ಮುಂದಿನ ದಿನಗಳಲ್ಲಿಯು ಸಹ ಬೀದಿ ವ್ಯಾಪಾರಿಗಳ ಆರ್ಥಿಕ ಶಕ್ತೀಕರಣಕ್ಕಾಗಿ ಬ್ಯಾಂಕ್‌ಗಳು ಹಾಗೂ ವಿವಿಧ ಇಲಾಖೆಗಳೊಂದಿಗೆ ಸಮನ್ವಯದಲ್ಲಿ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಿದ್ದೇವೆ ಎಂದು ತಿಳಿಸಿದರು.

ಬೀದಿ ಬದಿ ಮಾರಾಟಗಾರರ ಸ್ವಾವಲಂಬಿ ನಿಧಿ (ಪಿಎಂ ಸ್ವನಿಧಿ) ಬೀದಿ ವ್ಯಾಪಾರಿಗಳಿಗೆ ವಿಶೇಷ ಮೈಕ್ರೋ ಕ್ರೆಡಿಟ್ ಯೋಜನೆಯಡಿ 50,000 ರೂ ವರೆಗೆ ಭದ್ರತೆ ರಹಿತ ಸಾಲ, ನಿಯಮಿತ ಪಾವತಿಗಳ ಮೇಲೆ ಶೇ.7 ಬಡ್ಡಿ ಸಬ್ಸಿಡಿಗೆ ಅವಕಾಶವಿದ್ದು, ರಾಯಚೂರು ಜಿಲ್ಲೆಯಲ್ಲಿನ ಅರ್ಹ ಎಲ್ಲ ಬೀದಿ ಬದಿ ವ್ಯಾಪಾರಸ್ಥರು ಈ ಬಗ್ಗೆ ಮಾಹಿತಿ ಪಡೆದುಕೊಂಡು ಸಾಲ ಸೌಲಭ್ಯ ಪಡೆದುಕೊಳ್ಳುವಂತೆ ಆಯುಕ್ತರು ಮನವಿ ಮಾಡಿದರು.

ಸ್ಥಳದಲ್ಲೇ ಮಾಹಿತಿ: ಮೇಳದಲ್ಲಿ ಬ್ಯಾಂಕ್ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದು ಫಲಾನುಭವಿಗಳಿಗೆ ಯೋಜನೆಯ ವಿವರಗಳು, ಅರ್ಹತೆ, ದಾಖಲೆಗಳು ಹಾಗೂ ಸಾಲ ಪ್ರಕ್ರಿಯೆಗಳ ಕುರಿತು ಸ್ಥಳದಲ್ಲಿಯೇ ಮಾಹಿತಿ ನೀಡಿದರು. ಈ ವೇಳೆ, ಸುಮಾರು 50 ಫಲಾನುಭವಿಗಳಿಗೆ ಸ್ಥಳದಲ್ಲಿಯೇ ಸಾಲ ಮಂಜೂರಿ ಮಾಡಿ ದೃಢೀಕರಿಸಲಾಯಿತು. ದಿನಾಂಕ 23ರಂದು ಸ್ವೀಕೃತಿಯಾದ ಎಲ್ಲಾ ಅರ್ಜಿಗಳಿಗೆ ದಿನಾಂಕ 24ರೊಳಗೆ ಸಾಲ ಮಂಜೂರಿ ಮಾಡಲಾಗುವುದು ಎಂದು ಎಸ್‌ಬಿಐ ಪ್ರಾದೇಶಿಕ ವ್ಯವಸ್ಥಾಪಕರಾದ ಸೀತಾಬಾಯಿ ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ಪಾಲಿಕೆ ಅಧಿಕಾರಿಗಳಾದ ಶ್ರೀ ಕೃಷ್ಣ ಶಾವಂತಗೇರಿ, ಸಂತೋಷ ರಾಣಿ, ಸುರೇಶ ವಿಭೂತಿಮಠ್, ರಸೂಲ್, ಲೀಡ್ ಬ್ಯಾಂಕ್ ಮ್ಯಾನೇಜರ್ ಸುಧೀಂದ್ರ, ಎಸ್.ಬಿ.ಐ ಬ್ಯಾಂಕ್ ಮ್ಯಾನೇಜರ್ ಆನಂದ ವಾಲಿ ಸೇರಿದಂತೆ ಇತರರು ಇದ್ದರು.

# ದೇವದುರ್ಗದಲ್ಲಿ ವಂದೇ ಮಾತರಂ ಗೀತೆಯ 150ನೇ ವರ್ಷಾಚರಣೆಯ ಛಾಯಚಿತ್ರ ಪ್ರದರ್ಶನ

ಈ ವೇಳೆ ಸಂಪನ್ಮೂಲ ವ್ಯಕ್ತಿಗಳಾಗಿ ಎಸ್.ಕೆ.ಎಮ್. ಪಿ.ಯು.ಕಾಲೇಜಿನ ಪ್ರಾಂಶುಪಾಲರಾದ ಸಿದ್ದಯ್ಯ ಸ್ವಾಮಿ ಅವರು ಮಾತನಾಡಿ, ವಂದೇ ಮಾತರಂ ಗೀತೆಯ ಅರ್ಥ ಮತ್ತು ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ವಹಿಸಿದ ಮಹತ್ವದ ಪಾತ್ರದ ಕುರಿತು ವಿವರಿಸಿದರು.

ಇದಕ್ಕೂ ಮುಂಚೆ ಕಾರ್ಯಕ್ರಮದಲ್ಲಿ ವಂದೇ ಮಾತರಂ ಗೀತೆ ಪ್ರಸುತಪಡಿಸಿ ಗೌರವ ಸಲ್ಲಿಸಲಾಯಿತು. ಅಲ್ಲದೆ

ಹಿಂದಿನ ದಿನ ಅಯೋಜಿಸಲಾಗಿದ್ದ ವಿಶೇಷ ರಂಗೋಲಿ ಸ್ಪರ್ಧೆ, ಚಿತ್ರಕಲೆ ಮತ್ತು ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಅತಿಥಿಗಳಿಂದ ಬಹುಮಾನ ವಿತರಿಸಲಾಯಿತು.

ಇದೇ ಸಂದರ್ಭದಲ್ಲಿ ಪುರಸಭೆಯ ಮುಖ್ಯಾಧಿಕಾರಿಗಳಾದ ಹಂಪಯ್ಯ, ದೇವದುರ್ಗದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಉಪನ್ಯಾಸಕರಾದ ಸುಭಾಷ್ ಚಂದ್ರ ಪಾಟೀಲ್, ಜ್ಞಾನ ಜ್ಯೋತಿ ಕಾಲೇಜಿನ ಪ್ರಾಂಶುಪಾಲರಾದ ಅಮೀರ್, ದೇವದುರ್ಗ ತಾಲ್ಲೂಕು ಪತ್ರಕರ್ತ ಸಂಘದ ಅಧ್ಯಕ್ಷರಾದ ನರಸಿಂಗರಾವ್, ಕಾರ್ಯದರ್ಶಿಗಳಾದ ಬಂದೇ ನವಾಜ್, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯ ಸಹಾಯಕರಾದ ಗಂಗಮ್ಮ ಇದ್ದರು. ಬಿ.ಲಕ್ಷ್ಮಣ ಅವರು ಸ್ವಾಗತಿಸಿದರು. ರಾಜಶೇಖರ್ ಅವರು ನಿರೂಪಿಸಿ, ವಂದಿಸಿದರು.

# ಮಸ್ಕಿ ತಾಲೂಕಿನ ಹಾಲಾಪುರ ಗ್ರಾಪಂ ವಿಭಜಿಸಿ, ಹೊಸ ಗ್ರಾಪಂ ರಚಿಸುವಂತೆ ಗ್ರಾಮಸ್ಥರ ಒತ್ತಾಯ

ಎಸ್ ರಾಮಲದಿನ್ನಿ ಯಿಂದ ಗ್ರಾಪಂ ಗೆ ಹನ್ನೆರಡು ಕಿಲೊಮೀಟರ್ ಇದ್ದು ಇದರಿಂದ ಸಕಾಲಕ್ಕೆ ಪಂಚಾಯತಿಗೆ ಬರಲು ಆಗುತ್ತಿಲ್ಲ, ಸರಿಯಾದ ವ್ಯವಸ್ಥೆ ಇಲ್ಲ,ಮಹಿಳೆಯರು, ವೃದ್ಧರು ಪಂಚಾಯತ ಕೆಲಸಕ್ಕೆ ಬರಲು ಆಗದೆ ಕೆಲಸಕಾರ್ಯಗಳಿಂದ ದೂರ ಉಳಿಯುವ ತಾಪತ್ರಯ ಎದ್ದು ಕಾಣುತ್ತದೆ ಎಂದು ಅನೇಕ ಮಹಿಳೆಯರು, ಗ್ರಾಮಸ್ಥರು ಸುದ್ದಿಯೊಂದಿಗೆ ತಮ ನೋವು,ಅಳಲನ್ನು ಹಂಚಿಕೊಂಡಿದೆ . ನಂತರ ಗ್ರಾಪಂ ವಿಭಜಿಸಿ ಹೊಸ ಪಂಚಾಯತ ಮಾಡುವಂತೆ ಒತ್ತಾಯಿಸಿ ಮನವಿ ಪತ್ರವನ್ನು ಗ್ರಾಪಂ ಪಿಡಿಒ ವಿಶ್ವನಾಥ ಹೂಗಾರ,ತಾಪಂ ಇಒ ಅಮರೇಶ ಯಾದವ,ಮಾನ್ಯ ತಹಶಿಲ್ದಾರರಿಗೆ,ಶಾಸಕರ ಆಪ್ತ ಕಾರ್ಯದರ್ಶಿ ಶರಣೆಗೌಡ ಅವರಿಗೆ ಗ್ರಾಪಂ ವ್ಯಾಪ್ತಿಯ ಮುಖಂಡರು,ನಾಗರಿಕರು,ಗ್ರಾಪಂ ಸದಸ್ಯರು ಮನವಿ ಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕೆಡಿಪಿ ಸದಸ್ಯ ಕರಿಯಪ್ಪ, ಬಿ. ಕರಿಯಪ್ಪ, ಕೃಷಿ ಪ್ರಾಥಮಿಕ ಕೇಂದ್ರ ಹಾಲಾಪುರ ಅಧ್ಯಕ್ಷ ಜಗದೀಶಸ್ವಾಮಿ, ಯರ್ರಿ ತಾತ ಪಾಟೀಲ್, ಬಸ್ಸಪ್ಪ ಜೆ, ಬಸವರಾಜ್ ಆರ್, ಗ್ಯಾರಂಟಿ ಸಮಿತಿ ಸದಸ್ಯ ಪೌಲರಾಜ್, ರವಿ ದೇಸಾಯಿ, ಬಾಲ ಸ್ವಾಮಿ, ಬಸ್ಸಪ್ಪ ನಾಯಕ, ಸಿದ್ದಾರ್ಥ್ ಪೊಲೀಸ್ ಪಾಟೀಲ್ , ಅಮರೇಶ ಮಲ್ಲಟ, ಅಮರೇಶ್ ಕಡಬುರು ಸೇರಿದಂತೆ ಇನ್ನಿತರರು ಇದ್ದರು

# ಅಕ್ರಮ ಗಣಿಗಾರಿಕೆ ತಡೆಯುವಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆ ಸಂಪೂರ್ಣ ವಿಫಲ: ಗುರುರಾಜ ನಾಗ್ಲಾಪುರ

ಅಧಿಕಾರಿಗಳು ವಿಫಲರಾಗಿದ್ದು ಸರ್ಕಾರಕ್ಕೆ ಕೋಟ್ಯಾಂತರ ರೂ ನಷ್ಟ ಉಂಟುಮಾಡಿರುವ ಅಧಿಕಾರಿಗಳ ಮೇಲೆ ಸೂಕ್ತವಾದ ತನಿಖೆ ನಡೆಸಿ ಕ್ರಮ ಕೈಗೊಳ್ಳಬೇಕು, ದಂಡ ಪವಾತಿ ಯಾಗುವರೆಗೂ ಕ್ರಷರ್ ಘಟಕವನ್ನು ನಿಲ್ಲಿಸಬೇಕು ಪರಿಸರ ಇಲಾಖೆಯ ನಿಯಮಗಳನ್ನು ಅದೇಶಗಳನ್ನು ಉಲ್ಲಂಘಿಸಿ ನಡೆಸುತ್ತಿವ ಗಣಿಗಾರಿಕೆಯನ್ನು ನೀಲ್ಲಿಸಬೇಕು,ಹಾಗೂ ಮೋಕದ್ದಮೆ ದಾಖಲಿಸಬೇಕು, ತಾಲೂಕಿನಲ್ಲಿ ರಾಯಲ್ಟಿ ಪಾವತಿ ಮಾಡದೆ ವಿವಿಧ ಕಾಮಾಗಾರಿಗಳಿಗೆ ಕಲ್ಲಗಣಿಗಾರಿಕೆ ಮಾಡುತ್ತಿರುವವರ ಮೇಲೆ ಯಾವುದೆ ಕ್ರಮ ಕೈಗೊಳ್ಳದೆ ಇರುವ ಗಣಿ ಮತ್ತು ಭೂಮಿಜ್ಞಾನ ಇಲಾಖೆಯ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಬೇಕು ಹಾಗೂ ಪ್ರಮಾಣಿಕ ಮತ್ತು ದಕ್ಷ ಅಧಿಕಾರಿಗಳನ್ನು ಜಿಲ್ಲೆಗೆ ವರ್ಗ ಮಾಡಿ ಬಾಕಿ ಇರುವ ರಾಯಲ್ಟಿ ಮೋತ್ತವನ್ನು ಸರ್ಕಾರಕ್ಕೆ ಜಮಾ ಮಾಡುವುದಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ದಲಿತ ಮುಖಂಡರಾದ ಹನುಮಂತ ಸೀಕಲ್,ಕರ್ನಾಟಕ ಭೀಮಸೇನ ಜಿಲ್ಲಾಧ್ಯಕ್ಷರಾದ ಸಂಗನಬಸವ ಹಿರೇದಿನ್ನಿ,ಅಪ್ಪು ಅಭಿಮಾನ ಬಳಗದ ತಾ.ಅಧ್ಯಕ್ಷರಾದ ರೇಣುಕಾರಾಜ್,ಈರಣ್ಣ ನಾಯಕ,ಬಾಷ ಚೀಕಲಪರ್ವಿ ಇದ್ದರು.

# ಸರ್ಕಾರಿ ಬಾಲಮಂದಿರ, ದತ್ತು ಸ್ವೀಕಾರ ಕೇಂದ್ರ ವಿವಿಧೆಡೆ ಜಿಲ್ಲಾಧಿಕಾರಿಗಳಿಂದ ದಿಢೀರ್ ಭೇಟಿ; ಪರಿಶೀಲನೆ

' ಬಾಲಕರೊಂದಿಗೆ ಆಪ್ತವಾಗಿ ಮಾತನಾಡಿದರು. ಇಲ್ಲಿಂದ ಬಿಡುಗಡೆ ಆದ ಮೇಲೆ ಉತ್ತಮ ಜೀವನ ರೂಪಿಸಿಕೊಳ್ಳಬೇಕು. ಮುಂದೆ ಯಾವತ್ತೂ ತಪ್ಪು ಮಾಡಬಾರದು ಎಂದು ಸಲಹೆ ಮಾಡಿದರು.

ನಂತರ ಬಾಲಕಿಯರ ಬಾಲ ಮಂದಿರ ಮತ್ತು ಬಾಲಕರ ಬಾಲ ಮಂದಿರಗಳಿಗೆ ಭೇಟಿ ನೀಡಿ, ಅಲ್ಲಿನ ಮಕ್ಕಳೊಂದಿಗೆ ಸಮಾಲೋಚನೆ ನಡೆಸಿದರು. ಅಲ್ಲಿನ ಆಹಾರ ಸಾಮಗ್ರಿಗಳ ಗುಣಮಟ್ಟದ ಬಗ್ಗೆ ಪರಿಶೀಲನೆ ಮಾಡಿದರು. ಮಕ್ಕಳ ಶೈಕ್ಷಣಿಕ ಚಟುವಟಿಕೆಗಳ ಬಗ್ಗೆ ಸಂಸ್ಥೆಯ ಸಿಬ್ಬಂದಿಯಿಂದ ಮಾಹಿತಿ ಪಡೆದುಕೊಂಡರು.

ನಂತರ, ಶಿಶುಕೇಂದ್ರಿತ ಯೋಜನೆಯಡಿ ಅನುದಾನ ಸಂಹಿತೆಗೆ ಒಳಪಟ್ಟ ವಿಶ್ವಧರ್ಮ ಮಹಿಳಾ ಮತ್ತು ಮಕ್ಕಳ ಶಿಕ್ಷಣ ಸೇವಾ ಸಮಿತಿ ಇವರಿಂದ ನಿರ್ವಹಣೆ ಮಾಡಲಾಗುತ್ತಿರುವ ನಗರದ ನಿಜಲಿಂಗಪ್ಪ ಕಾಲೋನಿಯಲ್ಲಿನ ವಿಶ್ವಧರ್ಮ ಬುದ್ದಿಮಾಂದ್ಯ ಮಕ್ಕಳ ವಿಶೇಷ ಶಾಲೆಗೆ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗಕರಿಕರ ಸಬಲೀಕರಣ ಇಲಾಖೆಯ ಸಹಯೋಗದಲ್ಲಿ ಆಶಾದೀಪ ಟ್ರಸ್ಟ್ ನಿರ್ವಹಣೆ ಮಾಡುತ್ತಿರುವ ಪಬ್ಲಿಕ್ ಗಾರ್ಡನ್ ಹತ್ತಿರದಲ್ಲಿನ ಆಶಾದೀಪ ವಿಶೇಷ ಮಕ್ಕಳ ಶಾಲೆಗೆ ಭೇಟಿ ನೀಡಿ ಪರಿಶೀಲಿಸಿದರು. ಅಲ್ಲಿನ ಮೂಲಭೂತ ಸೌಕರ್ಯಗಳ ಬೇಡಿಕೆಗಳ ಬಗ್ಗೆ ಪ್ರಸ್ತಾವನೆ ಸಲ್ಲಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ನಿರೂಪಣಾಧಿಕಾರಿ ಕುಮಾರ್, ಜಿಲ್ಲಾ ವಿಕಲಚೇತನರ ಕಲ್ಯಾಣ ಅಧಿಕಾರಿ ಶ್ರೀದೇವಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಕಿರಿಲಿಂಗಪ್ಪ, ರಮೇಶ ಹಾಗೂ ಸಂಸ್ಥೆಯ ಅಧೀಕ್ಷಕರು ಇದ್ದರು.

### ಎಸ್‌ಆರ್‌ಜಿ ಶಾಲೆಯಲ್ಲಿ ಗ್ರ್ಯಾಂಡ್ ಪೆರೆಂಟ್ಸ್ ಡೇ, ರೈತರ ದಿನಾಚರಣೆ ಆಚರಣೆ

# ಹಿರಿಯರು ನಮ್ಮ ಸಮಾಜದ ಮಾರ್ಗದರ್ಶಕರು : ಮಾಜಿ ಶಾಸಕ ಸುಭಾಷ್ ಆರ್ ಗುತ್ತೇದಾರ




ಯುವಮಾರ್ಗ ಸುದ್ದಿ

**ಆಳಂದ,ಡಿ.23**–ಹಿರಿಯ ನಾಗರಿಕರು ನಮಗೆ ಮಾರ್ಗದರ್ಶನ ಮಾಡುತ್ತಾ ಸಮಾಜದ ಬಗ್ಗೆ ಉದಾತ್ತ ಧ್ಯೇಯಗಳನ್ನು ಹೊಂದಿದ್ದಾರೆ ಹೀಗಾಗಿ ಅವರ ಬಗ್ಗೆ ತಾತ್ಸಾರ ಮನೋಭಾವನೆ ತಾಳದೇ ಸಮಾಜದ ಆಸ್ತಿಯೆಂದು ತಿಳಿದು ಗೌರವಿಸಬೇಕು ಎಂದು ಮಾಜಿ ಶಾಸಕ ಸುಭಾಷ್ ಆರ್ ಗುತ್ತೇದಾರ ಅಭಿಪ್ರಾಯಪಟ್ಟರು.

ಮಂಗಳವಾರ ಆಳಂದ ಪಟ್ಟಣದ ಎಸ್‌ಆರ್‌ಜಿ ಫೌಂಡೇಶನ್ ಅಡಿಯಲ್ಲಿ ನಡೆಯುತ್ತಿರುವ ಎಸ್ ಆರ್ ಜಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಗ್ರ್ಯಾಂಡ್ ಪೆರೆಂಟ್ಸ್ ಡೇ, ರೈತರ ದಿನಾಚಾರಣೆ ಹಾಗೂ ಸ್ವಾತಂತ್ರ್ಯ ಹೋರಾಟಗಾರ, ಶತಾಯುಷಿಗಳಾಗಿದ್ದ ದಿ. ರುಕ್ಮಯ್ಯ ಗುತ್ತೇದಾರ ಅವರ 13ನೇ ಪುಣ್ಯಸ್ಮರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಯಸ್ಸಿನಿಂದ ಮಾಗಿದ ಹಿರಿಯ ನಾಗರಿಕರು ಸಮಾಜದ ಮಾರ್ಗದರ್ಶಕರು. ಅವರನ್ನು ಗೌರವಿಸುವ ಜೊತೆಗೆ ಅವರಿಗೆ ಆತ್ಮಸ್ಥೈರ್ಯ ತುಂಬುವುದು, ವೃದ್ಧಾಪ್ಯದ ಕಾಲದಲ್ಲಿ ಅವರನ್ನು ಕಾಡುವ ಏಕಾಂಗಿತನ, ಅಭದ್ರತೆ, ಆರೋಗ್ಯ ಸಮಸ್ಯೆಗಳನ್ನು ಅರಿತು ಅವರ ಬದುಕಿಗೆ ಆಸರೆ ಮತ್ತು ಚೈತನ್ಯ ನೀಡವುದು ಸಮಾಜದ ಕರ್ತವ್ಯ ಎಂದು ಹೇಳಿದರು.

ಅವಿಭಕ್ತ ಕುಟುಂಬಗಳಿದ್ದ ಕಾಲದಲ್ಲಿ ಹಿರಿಯರು ಮಕ್ಕಳು, ಮೊಮ್ಮಕ್ಕಳಿಗೆ ಮಾರ್ಗದರ್ಶನ ನೀಡುತ್ತಿದ್ದರು. ಇಂದು ಮಕ್ಕಳು, ಮೊಮ್ಮಕ್ಕಳು ಉದ್ಯೋಗಕ್ಕಾಗಿ ಮನೆಯಿಂದ ದೂರವಿದ್ದು, ಮನೆಯಲ್ಲಿರುವ ಹಿರಿಯರು ಏಕಾಂಗಿ ಜೀವನ ನಡೆಸುವ ಅಥವಾ ವೃದ್ಧಾಶ್ರಮ ಸೇರುವ ಸ್ಥಿತಿ ನಿರ್ಮಾಣವಾಗಿದೆ. ನಗರಕ್ಕಿಂತಲೂ ಗ್ರಾಮೀಣ ಪ್ರದೇಶದ ಹಿರಿಯರು ಹೆಚ್ಚು ಸಮಸ್ಯೆ ಅನುಭವಿಸುತ್ತಿದ್ದಾರೆ ಎಂದವರು ಬೇಸರಿಸಿದರು.

ರೈತರಿಲ್ಲದ ಸಮಾಜವನ್ನು ಊಹಿಸಿಕೊಳ್ಳುವುದು ಕಷ್ಟ. ರೈತರು ಅನ್ನದಾತರಾಗಿದ್ದಾರೆ. ಸ್ವಾತಂತ್ರ್ಯ ಪೂರ್ವಕಾಲದಿಂದಲೂ ರೈತರ ಶೋಷಣೆ ನಿಂತಿಲ್ಲ. ಪ್ರಕೃತಿ ಕೈ ಹಿಡಿದರೇ ರೈತರು ಯಾರ ಮುಂದೆಯೂ ಕೈ ಚಾಚುವುದಿಲ್ಲ ಅದಕ್ಕಾಗಿ ರೈತರು ಸಮಗ್ರ ಬೇಸಾಯ ಪದ್ಧತಿಯನ್ನು ಅಳವಡಿಸಿಕೊಳ್ಳಬೇಕು ಈ ನಿಟ್ಟಿನಲ್ಲಿ ರೈತ ಸಮೂಹ ಯೋಚಿಸಬೇಕಾಗಿದೆ ಎಂದರು.

ಶಾಲೆಯ ಪ್ರಾಚಾರ್ಯೆ ಜ್ಯೋತಿ ವಿಶಾಕ್ ಮಾತನಾಡಿ. ಶಾಲೆಯಲ್ಲಿ ಸಂಸ್ಥೆಯ ವತಿಯಿಂದ ಸಮಾಜಕ್ಕೆ ಅಗತ್ಯವಾಗಿರುವ ವಿಷಯಗಳನ್ನು ಪರಿಚಯಿಸುವ ನಿಟ್ಟಿನಲ್ಲಿ ವಿವಿಧ ವಿಷಯಗಳ ದಿನಾಚರಣೆಗಳನ್ನು ಆಚರಿಸಲಾಗುತ್ತಿದೆ. ಸಂಸ್ಥೆಯ ಧ್ಯೇಯ ವಾಕ್ಯ ಸಂಸ್ಕೃತಿ, ಭವಿಷ್ಯ, ಜ್ಞಾನ ವಿಷಯಗಳಿಗೆ ಒತ್ತು ನೀಡಲಾಗುತ್ತಿದೆ. ಇಂದು ಜಾಗತೀಕರಣದ ಪ್ರಭಾವದಿಂದ ಜಗತ್ತು ಚಿಕ್ಕದಾಗಿದೆ ಎಲ್ಲರೂ ತುಂಬಾ ಹತ್ತಿರವಾಗಿದ್ದೇವೆ ಆದರೆ ಭಾವನೆಗಳಿಂದ ದೂರವಾಗಿದ್ದೇವೆ ಎಂದರು.

ವೇದಿಕೆಯ ಮೇಲೆ ಸಂಸ್ಥೆಯ ಆಡಳಿತಾಧಿಕಾರಿ ಹಣಮಂತ ಶೇರಿ, ಕಾಶಿನಾಥ ಬಿರಾದಾರ, ಶಿವಶರಣಪ್ಪ ಚಿಂಚನಸೂರ, ಗುರುನಾಥ ಭಾವಿ ಇದ್ದರು.

ಶಿಕ್ಷಕಿ ಸುಪ್ರಿಯಾ ನಿರೂಪಿಸಿದರೆ, ವಿಜಯಲಕ್ಷ್ಮೀ ಸ್ವಾಗತಿಸಿದರು. ನಾಗಮ್ಮ ವಂದಿಸಿದರು.

# ಕವಿತಾಳ :ಪ.ಪಂ.ರಾಜೇಶ್ವರಿ ತಿಪ್ಪಯ್ಯಸ್ವಾಮಿ ಅಧ್ಯಕ್ಷೆಯಾಗಿ ಅವಿರೋದ ಆಯ್ಕೆ. ಜನರ ಸಮಸ್ಯೆ ಆಲಿಸಬೇಕು – ಶಾಸಕ ಜಿ.ಹಂಪಯ್ಯ ನಾಯಕ



ಯುವಮಾರ್ಗ ಸುದ್ದಿ

**ಕವಿತಾಳ : ಡಿ.22**–ಪಟ್ಟಣ ಪಂಚಾಯತಿಯ ನೂತನ ಅಧ್ಯಕ್ಷೆಯಾಗಿ 14 ವಾರ್ಡನ್ ಶ್ರಿಮತಿ ರಾಜೇಶ್ವರಿ ತಿಪ್ಪಯ್ಯಸ್ವಾಮಿ ಅವಿರೋಧವಾಗಿ ಆಯ್ಕೆಯಾದರು ಎಂದು ಚುನಾವಣಾ ಅಧಿಕಾರಿಯಾಗಿ ಆಗಮಿಸಿದ ಸಿರವಾರ ತಹಶಿಲ್ದಾರ ಅಶೋಕ ಪವಾರ್ ಹೇಳಿದರು .

ಕಾರಣಾಂತರಗಳಿಂದ ಖಾಸೀಂ ಬಿ ಚಾಂದಪಾಷಾ ಇವರು ರಾಜಿನಾಮೆ ಸಿಲ್ಲಿಸಿದ ಕಾರಣಕ್ಕೆ ಹೊಸ ಅದ್ಯಕ್ಷ ರ ಆಯ್ಕೆ ಪ್ರಕ್ರಿಯೆ ನಡೆಯಿತು .ಒಟ್ಟು 16 ಜನ ಸದಸ್ಯ ಪೈಕಿ ರಾಜೇಶ್ವರಿ ತಿಪ್ಪಯ್ಯ ಸ್ವಾಮಿ ಒಬ್ಬರೆ ನಾಮ ಪತ್ರ ಸಲ್ಲಿಸಿದ್ದು 16 ಜನ ಸಂಖ್ಯಾ ಬಲದ ಸದಸ್ಯರ ಪೈಕಿ 11 ಜನ ಉಪಸ್ಥಿತರಿದ್ದು ಶಾಸಕರು ಒಂದು ಮತ ಚಲಾಯಿಸಿರುವರು , ನಿಗದಿತ ಸಮಯದ ಒಳಗೆ ಇತರೆ ಯಾವುದೇ ನಾಮ ಪತ್ರ ಸಲ್ಲಿಕೆಯಾಗಿರುವುದಿಲ್ಲ , ಮತ್ತು ಯಾವುದೇ ನಾಮಪತ್ರ ಹಿಂಪಡೆದಿರುದಿಲ್ಲ , ಆಯ್ಕೆಗೆ ಬೇಕಾದ ಕೋರಂ ಸಂಖ್ಯಾಬಲ ಇದ್ದ ಕಾರಣ ರಾಜೇಶ್ವರಿ ತಿಪ್ಪಯ್ಯಸ್ವಾಮಿಯುವರನ್ನು ಅವಿರೋಧವಾಗಿ ಆಯ್ಕೆಮಾಡಲಾಗಿದೆ ಎಂದು ಸಿರವಾರ ತಹಶಿಲ್ದಾರ ಅಶೋಕ ಪವಾರ್ ಘೋಷಣೆ ಮಾಡಿದರು .

ಕಾಂಗ್ರೆಸ್ ಕಾರ್ಯಕರ್ತರು ಬೆಂಬಲಿಗರು ಪಟಾಕಿ ಹಚ್ಚಿ ಗುಲಾಲು ಎರಚಿಕೊಂಡು ಸಂಭ್ರಮಿಸಿದರು.ಶಾಸಕ ಜಿ.ಹಂಪಯ್ಯ ನಾಯಕ ಮಾತನಾಡಿ ಕಾಂಗ್ರೆಸ್ ಯಾವತ್ತಿದ್ದರು ಬಡವರು , ದಿನ ದಲಿತರು , ಶ್ರಮೀಕರ ಪಕ್ಷ , ಕವಿತಾಳ ಒಂದು ದೊಡ್ಡ ಪಟ್ಟಣ ಇಂತಹ ಒಂದು ಪಟ್ಟಣ ಪಂಚಾಯಿತಿಯ ಅಧ್ಯಕ್ಷೆಯಾಗಿ ಆಯ್ಕೆಯಾದ ರಾಜೇಶ್ವರಿಯವರಿಗೆ ಅಭಿನಂದನೆಗಳನ್ನು ಸಲ್ಲಿಸಿದರು . ಮೂಲಭೂತ ಸೌಕರ್ಯಗಳಿಗೆ ಹೆಚ್ಚಿನ ಆದ್ಯತೆ ನೀಡಿ ಎಲ್ಲರೋಂದಿಗೆ ಬೆರೆತು ಅಧಿಕಾರ ನಿಭಾಯಿಸಬೇಕದು ಸಲಹೆ ನೀಡಿದರು .

ಈ ಸಂದರ್ಭದಲ್ಲಿ ವಾ.ಜಿ.ಪಂ.ಸದಸ್ಯ ಕಿರಿಲಿಂಗಪ್ಪ .ಮಾ.ತಾ.ಪಂ.ಸದಸ್ಯ ಮಾಳಪ್ಪ ತೋಳ , ಮಾಜಿ.ಅಧ್ಯಕ್ಷೆ ಖಾಸೀಂ ಬಿ ಚಾಂದಪಾಷಾ , ಉಪಾಧ್ಯಕ್ಷೆ ಎಲೀಜಾ ಓನಪ್ಪ , ಸದಸ್ಯರಾದ ರಮಾದೇವಿ , ಮಲ್ಲಿಕಾರ್ಜುನ ಗೌಡ ,ಹುಲುಗಪ್ಪ , ಅಮರೇಶ ಕಟ್ಟಿಮನಿ , ರಮೇಶ ನಗನೂರು , ಮುಖಂಡರಾದ ರಾ.ವಾ.ವಿ.ವಿದ್ಯಾಲಯದ ಸಿಂಡಿಕೇಟ್ ಸದಸ್ಯ ಶಿವಣ್ಣ ವಕೀಲ್ ಶೇಖರಪ್ಪ ಸಾಹುಕಾರ್ ಹಟ್ಟಿ , ಚನ್ನರೆಡ್ಡಿ ಸಾಹುಕಾರ್ ಬಾವಿಕಟ್ಟಿ , ಶಿವರಾಜ ಭೋವಿ , ಹನುಮಂತ ಅರಕೇರಿ ಇದ್ದರು


# ಅದ್ದೂರಿಯಾಗಿ ಜರುಗಿದ ಅಯ್ಯಪ್ಪ ಸ್ವಾಮಿ ಮಂಡಲ ಪೂಜೆ ಹಾಗೂ ಭಾವಚಿತ್ರ ಮೇರವಣಿಗೆ

ಯುವಮಾರ್ಗ ಸುದ್ದಿ

**ಲಿಂಗಸಗೂರು : ಡಿ 23**– , ಪಟ್ಟಣದ ಅಯ್ಯಪ್ಪಸ್ವಾಮಿ ದೇವಸ್ಥಾನದ 9 ನೇ ವಾರ್ಷಿಕೋತ್ಸವ ಹಾಗೂ ಮಂಡಲ ಪೂಜೆ ನಿಮತ್ಯ ಮಾಲಾಧಾರಿಗಳು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಅಯ್ಯಪ್ಪಸ್ವಾಮಿ ಉತ್ಸವ ಮೂರ್ತಿ ಮತ್ತು ಭಾವಚಿತ್ರದ ಭವ್ಯ ಮೆರವಣಿಗೆ ನಡೆಸಿದರು.

ಸುಪ್ರಭಾತದೊಂದಿಗೆ ಆರಂಭಗೊಂಡ ಪೂಜಾ ಕೈಂಕರ್ಯಗಳು ನೈರ್ಮಲ್ಯ ದರ್ಶನಂ, ಮಹಾಗಣಪತಿ ಹೋಮ,ಅಯ್ಯಪ್ಪಸ್ವಾಮಿ ಮೂರ್ತಿ ಸೇರಿದಂತೆ ದೇವಸ್ಥಾನದ ಉಪ ದೇವತೆಗಳ ಕಳಸಾಭಿಷೇಕಂ ನೆರವೇರಿಸಿದ ನಂತರದಲ್ಲಿ ಈಶ್ವರ ದೇವಸ್ಥಾನದಲ್ಲಿ ತೆರೆದ ಅಲಂಕೃತ ವಾಹನದಲ್ಲಿ ಭಾವಚಿತ್ರ ಪ್ರತಿಷ್ಠಾಪಿಸಿ, ಉತ್ಸವ ಕರ್ಪೂರದಾರತಿ ಬೆಳಗುತ್ತ ಮೆರವಣಿಗೆಗೆ ಮೂರ್ತಿಯೊಂದಿಗೆ ಚಾಲನೆ ನೀಡಲಾಯಿತು. ಈಶ್ವರ

ದೇವಸ್ಥಾನದಿಂದ ಆರಂಭಗೊಂಡ ಮೆರವಣಿಗೆ ಹಳೆಬಸ್ ನಿಲ್ದಾಣ, ಹಳೆ ವಿಜಯ ಬ್ಯಾಂಕ್ ರಸ್ತೆ, ಗಡಿಯಾರ ವೃತ್ತ, ಅಂಚೆ ಕಚೇರಿ, ಬಸ್ ನಿಲ್ದಾಣ ಮಾರ್ಗವಾಗಿ ಅಯ್ಯಪ್ಪಸ್ವಾಮಿ ದೇವಸ್ಥಾನಕ್ಕೆ ಸಾಗಿ ಬಂದಿತು.ನಂತರದಲ್ಲಿ ಅನ್ನಸಂತರ್ಪಣೆ ನೆರವೇರಿತು.ಸಂಜೆ ದೀಪಾರಾಧನೆ, ಅಯ್ಯಪ್ಪಸ್ವಾಮಿ 18 ಮೆಟ್ಟಿಲು



ಪಡಿ ಪೂಜೆ, ಪುಷ್ಪಾಭಿಷೇಕ,ಪಾನಕ ನೈವೇದ್ಯ ಅರ್ಪಿಸಿ ಹರಿವರಾಸನಂ ಮೂಲಕ ಪೂಜೆಗಳಿಗೆ ವಿದಾಯ ಹೇಳಲಾಯಿತು.ಕೇರಳ ಮೂಲದ ಪ್ರಶಾಂತ್ ನಂಬೊದರಿ,ನೇತೃತ್ವದಲ್ಲಿ ಸಿದ್ರಾಮು ಗುರುಸ್ವಾಮಿ ನಗರಗುಂಡ ಅವರ ಸಹಕಾರದಲ್ಲಿ ಪೂಜಾ ಕಾರ್ಯಗಳು ನಡೆದವು. ಅಯ್ಯಪ್ಪಸ್ವಾಮಿ ದೇವಸ್ಥಾನದ ಸಮಿತಿ ಟ್ರಸ್ಟ ಅಧ್ಯಕ್ಷ ಮನೋಹರ ರೆಡ್ಡಿ ಮುನ್ನೂರು,ಕಾರ್ಯದರ್ಶಿ ಈರಣ್ಣ ಗುರುಸ್ವಾಮಿ, ಖಜಾಂಚಿ ಬಾಲನ್, ಮಾರೆಪ್ಪ ನಾಯಕ, ರಾಜೇಶ ಮಾಣಿಕ್ ಸೇರಿದಂತೆ ಎಲ್ಲಾ ಭಕ್ತದಿಗಳು ಭಾಗವಹಿಸಿದ್ದರು

ಯುವ ಮಾರ್ಗ
www.yuvamarga.com Yuva Marga yuva_marga_

# ಕೇಂದ್ರ ಸಚಿವರ ಜೊತೆ ಡಿಸಿಎಂ ಡಿಕೆಶಿ ಸರಣಿ ಸಭೆ

**ನವದೆಹಲಿ,ಡಿ.23–** ರಾಜ್ಯದ ಹಿತಾಸಕ್ತಿಗೆ ಅನುಗುಣವಾಗಿ ನೀರಾವರಿ ಯೋಜನೆಗಳು ಹಾಗೂ ಇತರ ಅಭಿವೃದ್ಧಿ ಕಾರ್ಯಗಳ ಬಗ್ಗೆ ಕೇಂದ್ರ ಸಚಿವರ ಜೊತೆ ಸರಣಿ ಸಭೆಗಳನ್ನು ನಡೆಸುವುದಾಗಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.

ದೆಹಲಿಗೆ ಆಗಮಿಸಿದ ಅವರು, ಕರ್ನಾಟಕ ಭವನದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದರು. ನದಿಗಳ ಜೋಡಣೆಗೆ ಸಂಬಂಧಪಟ್ಟಂತೆ ಇಂದು ಮಧ್ಯಾಹ್ನ ಕೇಂದ್ರ ಜಲ ಶಕ್ತಿ ಸಚಿವ ಸಿ.ಆರ್.ಪಾಟೀಲ್ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದೆ. ಇದೇ ವೇಳೆ ತಾವು ಕರ್ನಾಟಕದ ಹಲವಾರು ನೀರಾವರಿ ಯೋಜನೆಗಳ ಬೇಡಿಕೆಗಳ ಬಗ್ಗೆ ಕೇಂದ್ರ ಸಚಿವರ ಜೊತೆ ಚರ್ಚೆ ನಡೆಸುತ್ತೆ?ನೆ ಎಂದರು.

ಚರ್ಚೆಯ ವೇಳೆ ತುಂಗ–ಭದ್ರಾ ನದಿ ನೀರನ್ನು ಕರ್ನಾಟಕ ಮತ್ತು ತೆಲಂಗಾಣ ರಾಜ್ಯಗಳು ಸಮರ್ಥವಾಗಿ ಬಳಕೆ ಮಾಡಿಕೊಳ್ಳಲು ಸಮತೋಲಿತ ಅಣೆಕಟ್ಟು ನಿರ್ಮಾಣ ಮಾಡಬೇಕಿದೆ. ನೀರಿನ ಸಂಗ್ರಹಣೆಗೆ ಪರ್ಯಾಯ ಸೌಲಭ್ಯದ ಅನಿವಾರ್ಯತೆ ಬಗ್ಗೆ ಕೇಂದ್ರ ಸಚಿವರಿಗೆ ಮನವರಿಕೆ ಮಾಡಿಕೊಡಲಾಗುವುದು. ಇದೇ ವೇಳೆ ಕೃಷ್ಣ ನ್ಯಾಯಾಧಿಕರಣದ ತೀರ್ಪಿನ ಅಧಿಸೂಚನೆ ಬಾಕಿ ಇರುವ ಬಗ್ಗೆ, ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಬಜೆಟ್ ನಲ್ಲಿ ಘೋಷಿತ ಅನುದಾನ ಬಿಡುಗಡೆ ಮಾಡುವುದು, ಕಾವೇರಿ ನದಿಗೆ ಮೇಕೆದಾಟು, ಮಹದಾಯಿ ನದಿಗೆ ಅಡ್ಡಲಾಗಿ ಕಳಸ–ಬಂಡೂರಿ ಅಣೆಕಟ್ಟು ನಿರ್ಮಿಸುವುದು ಸೇರಿದಂತೆ ರಾಜ್ಯಕ್ಕೆ ಹಿತಾಸಕ್ತಿಗೆ ಅನುವಾಗುವ ಎಲ್ಲಾ ವಿಷಯುಗಳ ಬಗ್ಗೆ ಕೇಂದ್ರ ಸಚಿವರ ಜೊತೆ ಚರ್ಚಿಸುವುದಾಗಿ ಹೇಳಿದರು.

ಅದಕ್ಕೂ ಮೊದಲು ಕೇಂದ್ರ ನಗರಾಭಿವೃದ್ಧಿ ಸಚಿವ ಮನೋಹರ್ ಲಾಲ್ ಖಟ್ಟರ್ ಜೊತೆ ಚರ್ಚೆ ಮಾಡುತ್ತೆ?ನೆ. ಮೆಟ್ರೊ? ಯೋಜನೆಗೆ ಕೇಂದ್ರದ ಅರ್ಧದಷ್ಟು ವೆಚ್ಚ ಭರಿಸಬೇಕು ಎಂದು ಬೇಡಿಕೆ ಮಂಡಿಸಲಾಗುವುದು. ಶೇ.50ರಷ್ಟು ವೆಚ್ಚ ಭರಿಸುವುದಾಗಿ ಹೇಳಿದ್ದ ಕೇಂದ್ರ ಸರ್ಕಾರ ಈಗ ಶೇ.12 ರಷ್ಟು ಮಾತ್ರ ಹಣ ನೀಡುತ್ತಿದೆ. ಇದು ಸಾಲುವುದಿಲ್ಲ ಎಂಬುದು ರಾಜ್ಯದ ಅಭಿಪ್ರಾಯವಾಗಿದೆ. ಇದಕ್ಕಾಗಿ ಕೇಂದ್ರ ಸರ್ಕಾರ ವೆಚ್ಚದ ಅರ್ಧದಷ್ಟು ಭರಿಸಬೇಕು ಎಂದು ಆಗ್ರಹಿಸುತ್ತೆನೆ ಎಂದರು.

2027ರ ವೇಳೆ 175 ಕಿಲೋ ಮೀಟರ್ ಉದ್ದದ ಮೆಟ್ರೊ ಮಾರ್ಗದ ಕಾಮಗಾರಿಗಳು ಮುಗಿಯಬೇಕಿದೆ. ಕೇಂದ್ರ ಸರ್ಕಾರ ಕೆಲವು ಪ್ರಸ್ತಾವನೆಗಳನ್ನು ಬಾಕಿ ಉಳಿಸಿಕೊಂಡಿದೆ. ಆ ವಿಚಾರವನ್ನು ಕೇಂದ್ರ ಸಚಿವರ ಗಮನಕ್ಕೆ ತರುವ ಮೂಲಕ ಶೀಘ್ರ ಅನುಮತಿ ಪಡೆದುಕೊಳ್ಳಲು ಪ್ರಯತ್ನಿಸುವುದಾಗಿ ಹೇಳಿದರು.ಕೇಂದ್ರ ಸರ್ಕಾರದಿಂದ ವಿವಿಧ ಯೋಜನೆಗಳಿಗೆ ಅನುದಾನ ಹಂಚಿಕೆಯಲ್ಲಾಗುತ್ತಿರುವ ತಾರತಮ್ಯದ ಬಗ್ಗೆಯೂ ಚರ್ಚೆ ನಡೆಸುವುದಾಗಿ ತಿಳಿಸಿದರು.

ಬೆಂಗಳೂರಿನಲ್ಲಿ ಕ್ರಿಕೆಟ್ ಪಂದ್ಯಾವಳಿ ನಡೆಸಲು ಅವಕಾಶ ನೀಡುವುದಿಲ್ಲ ಎಂದು ನಿರಾಕರಿಸಿರುವ ಬಗ್ಗೆ ನನಗೆ ಮಾಹಿತಿ ಇಲ್ಲ. ಬೆಂಗಳೂರಿನ ಗೌರವ ಉಳಿಸಲು ಐಪಿಎಲ್ ಸೇರಿದಂತೆ ಕ್ರಿಕೆಟ್ ಪಂದ್ಯಾವಳಿ ನಡೆಯಬೇಕು ಎಂಬುದು ನನ್ನ ಅಭಿಪ್ರಾಯ ಎಂದರು. ಬೆಂಗಳೂರಿನ ಗೌರವ ಉಳಿಸಬೇಕು, ಅದಕ್ಕಾಗಿ ಷರತ್ತುಗಳನ್ನು ವಿಧಿಸಿ, ಕ್ರಿಕೆಟ್ ಪಂದ್ಯಾವಳಿ ನಡೆಸಲು ಅನುಮತಿ



ನೀಡಬೇಕು. ಈ ಕುರಿತು ನಿರ್ಣಯ ಕೈಗೊಳ್ಳಲು ಗೃಹ ಸಚಿವರಿಗೆ ಜವಾಬ್ದಾರಿ ನೀಡಲಾಗಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೂ ಕ್ರಿಕೆಟ್ ಪಂದ್ಯಾವಳಿಗಳಿಗೆ ಅನುಮತಿ ನೀಡಬಾರದು ಎಂಬ ಅಭಿಪ್ರಾಯ ಇಲ್ಲ. ಆದರೆ ಭದ್ರತೆ ವಿಚಾರವಾಗಿ ಎಚ್ಚರಿಕೆ ವಹಿಸಬೇಕು ಎಂಬುದು ಅವರ ನಿಲುವು ಎಂದರು.

# ಜ. 29 ರಿಂದ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ



**ಬೆಂಗಳೂರು ಡಿ.23–** 17ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಜನವರಿ 29ರಿಂದ ಫೆಬ್ರವರಿ 6ರ ವರೆಗೆ ನಡೆಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಅವರು, 17ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಸಂಬಂಧ ಸಂಘಟನಾ ಸಮಿತಿ ಜೊತೆ ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಸಭೆ ನಡೆಸಿ ಮಾತನಾಡಿದ ಅವರು, ಹಿರಿಯ ಚಲನಚಿತ್ರ ಕಲಾವಿದರು, ನಿರ್ದೇಶಕರು ನಿರ್ಮಾಪಕರು ಆದ ಪ್ರಕಾಶ್ ರಾಜ್ ಅವರನ್ನು 17ನೇ ಅಂತರರಾಷ್ಟ್ರೀಯ ಚಲನಚಿತ್ರೋತ್ಸವದ ರಾಯಭಾರಿಯಾಗಿ ಆಗಿ ನೇಮಿಸಲಾಗಿದೆ ಎಂದರು. ಅಂತರಾಷ್ಟ್ರೀಯ ಚಲನಚಿತ್ರ ಉತ್ಸವದ ಉದ್ಘಾಟನೆ ವಿಧಾನಸೌಧದ ಮುಂಭಾಗದಲ್ಲಿ ಭವ್ಯ ಮೆಟ್ಟಿಲುಗಳ ಮೇಲೆ ನಡೆಯಲಿದೆಈ ಬಾರಿಯ ಚಲನಚಿತ್ರೋತ್ಸವದಲ್ಲಿಮಹಿಳಾ ಸಬಲೀಕರಣ ಕುರಿತಾದ ಥೀಮ್ ಇರಲಿದೆಎಂದು ಹೇಳಿದರು.

ರಾಜಾಜಿನಗರದ ಲುಲುಮಾಲ್‌ನಲ್ಲಿರುವ ಸಿನಿ ಪೊಲಿಸ್‌ನ 11 ಸ್ಕಿನ್‌ಗಳಲ್ಲಿ ಚಿತ್ರೋತ್ಸವದ ಚಲನಚಿತ್ರಗಳ ಪ್ರದರ್ಶನ ನಡೆಯಲಿದೆ.ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ದಲ್ಲಿ ಏಷಿಯನ್, ಭಾರತೀಯ ಮತ್ತು ಕನ್ನಡ ಸಿನಿಮಾ ಸ್ಪರ್ಧಾತ್ಮಕ ವಿಭಾಗಗಳಿಗೆ ಚಲನಚಿತ್ರಗಳ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಿದ್ದು, ಇದಕ್ಕೆ ಉತ್ತಮ ಸ್ಪಂದನೆ ದೊರಕಿದೆ. ಎಂದರು.

ಈ ಮೂರು ಸ್ಪರ್ಧಾ ವಿಭಾಗಗಳಿಗೆ ಇದುವರೆಗೆ 110ಕ್ಕೂ ಹೆಚ್ಚು ಚಲನಚಿತ್ರಗಳು ಸಲ್ಲಿಕೆಯಾಗಿವೆ. ಚಲನಚಿತ್ರಗಳ ಸ್ಪರ್ಧಾತ್ಮಕ ವಿಭಾಗಗಳ ಅರ್ಜಿ ಸಲ್ಲಿಕೆಗೆ ಡಿಸೆಂಬರ್ 31, 2025 ಕಡೆಯ ದಿನಾಂಕವಾಗಿರುತ್ತದೆ.17ನೇ ಅಂತರ ರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ರಾಜಾಜಿನಗರದ ಲುಲು ಮಾಲ್, ಜೊತೆಗೆ ಡಾ. ರಾಜ್ ಕುಮಾರ್ ಭವನ, ಕಲಾವಿದರ ಸಂಘ, ಚಾಮರಾಜಪೇಟೆ ಹಾಗೂ ಬನಶಂಕರಿಯಲ್ಲಿರವ ಸುಚಿತ್ರ ಫಿಲಂ ಸೊಸೈಟಿ ಚಿತ್ರಮಂದಿರಗಳಲ್ಲೂ ಚಲನಚಿತ್ರಗಳ ಪ್ರದರ್ಶನವಿರಲಿದೆ.

ಕನ್ನಡ ಮತ್ತು ಭಾರತೀಯ ಚಿತ್ರಗಳು ಸೇರಿದಂತೆ ಒಟ್ಟಾರೆ 60ಕ್ಕೂ ಹೆಚ್ಚು ದೇಶಗಳ 200 ಚಲನಚಿತ್ರಗಳ, 400ಕ್ಕೂ ಹೆಚ್ಚು ಪ್ರದರ್ಶನಗಳಿರಲಿವೆ.ವಿಶ್ವದ ಪ್ರತಿಷ್ಠಿತ ಚಲನಚಿತ್ರೋತ್ಸವಗಳಲ್ಲಿ ಪಾಲ್ಗೊಂಡು ವಿವಿಧ ಪ್ರಶಸ್ತಿಗಳನ್ನು ಪಡೆದ ಮತ್ತು ಜನಮನ್ನಣೆಗಳಿಸಿದ ದೇಶ–ವಿದೇಶದ ಅತ್ಯುತ್ತಮ ಚಲನಚಿತ್ರಗಳು 17 ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ಭಾಗವಹಿಸುತ್ತಿವೆ. ಕಾನ್ಸ್ (ಫ್ರಾನ್ಸ್), ಬರ್ಲಿನ್ (ಜರ್ಮನಿ, ವೆನಿಸ್ (ಇಟಲಿ), ಕಾರ್ಲೋವಿ ವೇರಿ (ಜೆಕ್ ರಿಪಬ್ಲಿಕ್, ಲೊಕಾರ್ನೊ (ಸಿಟ್ಜರ್ಲೆಂಡ್), ರಾಟರ್‌ಡ್ಯಾಮ್ (ನೆದರ್ ಲ್ಯಾಂಡ್), ಬೂಸಾನ್ (ದಕ್ಷಿಣ ಕೊರಿಯಾ), ಟೊರಂಟೋ (ಕೆನಡಾ) ದೇಶಗಳ ಚಿತ್ರೋತ್ಸವದಲ್ಲಿ ಭಾಗವಹಿಸಿ ಪ್ರಶಸ್ತಿ, ಮೆಚ್ಚುಗೆ ಪಡೆದ ಚಲನಚಿತ್ರಗಳು ಬೆಂಗಳೂರು ಚಿತ್ರೋತ್ಸವದಲ್ಲಿ ಒಂದೇ ಕಡೆ ಸಿನಿಮಾ ಪ್ರಿಯರಿಗೆ ವೀಕ್ಷಿಸಲು ದೊರೆಯಲಿವೆ. ಎಂದರು

ಜೊತೆಗೆ ಈ ಬಾರಿಯ ಆಸ್ಕರ್ ಪ್ರಶಸ್ತಿಗೆ ಶಾರ್ಟ್ ಲಿಸ್ಟ್ ಆಗಿರುವ ವಿವಿಧ ದೇಶದ ಅತ್ಯುತ್ತಮ ಚಲನಚಿತ್ರಗಳು ಸಹ ನಮ್ಮ ಚಿತ್ರೋತ್ಸವದಲ್ಲಿ ಪ್ರದರ್ಶನಗೊಳ್ಳಲಿವೆಪೋಲಿಷ್ ಕಲ್ಬರಲ್ ಸೆಂಟರ್, ನವದೆಹಲಿ, ಗೋಥೆ ಇನ್ಸಿಟ್ಯೂಟ್ ಮ್ಯಾಕ್ಸ್ ಮುಲ್ಲರ್ ಭವನ, ಬೆಂಗಳೂರು, ಅಲಿಯಾನ್ಸ್ ಫ್ರಾನ್ಸೇ ಫ್ರೆಂಚ್ ಇನ್ಸಿಟ್ಯೂಟ್ ಹಾಗೂ ರಾಯಲ್ ಥೈಲ್ಯಾಂಡ್ ಕಾನ್ಸುಲೇಟ್‌ನವರು ಅವರ ದೇಶಗಳ ಅತ್ಯುತ್ತಮ ಚಲನಚಿತ್ರಗಳನ್ನು ಚಿತ್ರೋತ್ಸವದಲ್ಲಿ ಪ್ರದರ್ಶನಕ್ಕೆ ನೀಡುತ್ತಿದ್ದಾರೆ.

ಹಾಗೆಯೇ ಪೋಲಿಷ್ ಕಲ್ಬರಲ್ ಸೆಂಟರ್ ಸಹಯೋಗದಲ್ಲಿ ಪೊಲೆಂಡ್‌ನ ಖ್ಯಾತ ನಿರ್ದೇಶಕರಾದ ಅಂದ್ರೆ ವಾಜ್ದಾ ಅವರ ಶತಮಾನೋತ್ಸವ ಸ್ಮರಣಾರ್ಥವಾಗಿ ಅವರ ಆಯ್ದ ಚಲನಚಿತ್ರಗಳ ವಿಶೇಷ ಪುನರಾವಲೋಕನ , ಈ ಬಾರಿ ಚಿತ್ರೋತ್ಸವದಲ್ಲಿ ಆಯೋಜಿಸಲಾಗಿದೆ.

ಇದರೊಂದಿಗೆ ಅಲಿಯಾನ್ಸ್ ಫ್ರಾನ್ಸೇ ಬೆಂಗಳೂರು ಹಾಗೂ ಫ್ರೆಂಚ್ ಇನ್ಸಿಟ್ಯೂಟ್ ಇನ್ ಇಂಡಿಯಾ ಸಹಯೋಗದಲ್ಲಿ ಆಫ್ರಿಕಾ ಸಿನಿಮಾಗಳ ಇತಿಹಾಸವನ್ನು ದಾಖಲಿಸುವ ವಿಶೇಷ ಚಲನಚಿತ್ರಗಳ ಸರಣಿಯನ್ನೂ ಈ ವರ್ಷದ ಚಿತ್ರೋತ್ಸವದಲ್ಲಿ ಪ್ರದರ್ಶಿಸ ಲಾಗುತ್ತಿದೆ.ಎಂದು ಹೇಳಿದರು

ಈ ಬಾರಿ ಚಿತ್ರೋತ್ಸವದ ಫಿಲಂ ಅಕಾಡೆಮಿಕ್ ಕಾರ್ಯಕ್ರಮಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ನೋಂದಾಯಿತ ಪ್ರತಿನಿಧಿಗಳು ಭಾಗವಹಿಸಲು ಅನುಕೂಲವಾಗುವಂತೆ ಚಿತ್ರೋತ್ಸವದ ಪ್ರಧಾನ ಕೇಂದ್ರದಲ್ಲಿ ವಿಶೇಷ ವೇದಿಕೆ ಇರಲಿದೆ.

ಇದೇ ವೇದಿಕೆಯ ಆವರಣದಲ್ಲಿ 91 ವರ್ಷಗಳ ವರ್ಣ ರಂಜಿತ, ಸ್ಮರಣೀಯ ಸಿನಿಮಾ ಸಂಸ್ಕೃತಿಯ ಇತಿಹಾಸವಿರುವ ಕನ್ನಡ ಚಿತ್ರರಂಗದ ಮೈಲಿಗಲ್ಲುಗಳನ್ನು ಬಿಂಬಿಸುವ ವೈವಿಧ್ಯಮಯ ಛಾಯಾಚಿತ್ರ ಪ್ರದರ್ಶನವನ್ನು ಸಹ ಏರ್ಪಡಿಸಲಾಗುತ್ತದೆ.ಎಂದರು2025–26 ನೇರ ಸಾಲಿನ 17ನೇ ಅಂತರರಾಷ್ಟ್ರೀಯ ಚಲನ ಚಿತ್ರೋತ್ಸವ ಏರ್ಪಡಿಸಲು ರೂ. 7ಕೋಟಿ ರೂಪಾಯಿಗಳ ಅಗತ್ಯವಿರುವ ಅನುದಾನ ಒದಗಿಸಲಾಗಿದೆ.

ಸಮಾರೋಪ ಸಮಾರಂಭ ಅತ್ಯುತ್ತಮ ಚಲನಚಿತ್ರಗಳಿಗೆ ಪ್ರಶಸ್ತಿ, ಜೀವಮಾನ ಸಾಧನೆ ಪ್ರಶಸ್ತಿ ನೀಡಲಾಗುವುದು ಎಂದು ಮುಖ್ಯಮಂತ್ರಿಗಳು ತಿಳಿಸಿದರು. ಚಲನಚಿತ್ರ ಅಕಾಡೆಮಿ ಅಧ್ಯಕ್ಷರಾದ ಸಾಧು ಕೋಕಿಲ, ವಾರ್ತಾ ಇಲಾಖೆಯ ಕಾರ್ಯದರ್ಶಿ ಬಿ ಬಿ ಕಾವೇರಿ, ಆಯುಕ್ತರಾದ ಹೇಮಂತ್ ನಿಂಬಾಳ್ಕರ್, ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್, ಆರ್ಥಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್ ಹಾಗೂ ಅಕಾಡೆಮಿ ಸದಸ್ಯರು, ಸಂಘಟನಾ ಸಮಿತಿ ಸದಸ್ಯರು , ಚಲನಚಿತ್ರ ವಾಣಿಜ್ಯ ಮಂಡಳಿ ಪದಾಧಿಕಾರಿಗಳು ಪೂರ್ವಭಾವಿ ಸಭೆಯಲ್ಲಿ ಉಪಸ್ಥಿತರಿದ್ದರು.

# ಆಕ್ರೋಶವಾಗಲಿ ಆಕ್ರಂದನ ನಡೆ, ಸಮಾನತೆಯ ಭವಿಷ್ಯದೆಡೆ ಪುಸ್ತಕ ಬಿಡುಗಡೆ

**ಬಳ್ಳಾರಿ, ಡಿ,23–** ಎಐಎಂಎಸ್ ಎಸ್ ಬಳ್ಳಾರಿ ಜಿಲ್ಲಾ ಸಮಿತಿ ವತಿಯಿಂದ ಮಹಿಳೆಯರು ಮತ್ತು ಮಕ್ಕಳ ಮೇಲಿನ ಅಪರಾಧಗಳ ವಿರುದ್ಧ ಸಮರ ಹೂಡಲು ರಾಜ್ಯವ್ಯಾಪಿ ಆಂದೋಲನದ ಅಂಗವಾಗಿ ಪತ್ರಿಕಾಗೋಷ್ಠಿಯನ್ನು ಹಮ್ಮಿಕೊಳ್ಳಲಾಯಿತು. ಈ ಸಂದರ್ಭದಲ್ಲಿ ಆಕ್ರೋಶವಾಗಲಿ ಆಕ್ರಂದನ ನಡೆ, ಸಮಾನತೆಯ ಭವಿಷ್ಯದೆಡೆ ಪುಸ್ತಕ ಬಿಡುಗಡೆ ಮಾಡಲಾಯಿತು.



ಎಐಎಂಎಸ್ ಎಸ್ ರಾಜ್ಯಾಧ್ಯಕ್ಷರಾದ ಎಂ ಎನ್ ಮಂಜುಳ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತಾನಾಡುತ್ತಾ, 2024ರಲ್ಲಿ ಇಸ್ರೋದ ಪಿಎಸ್ ಎಲ್ ವಿ ಸಿ 58 ಮಿಷನ್‌ನ ಭಾಗವಾದ ಡಬ್ಲುಇಎಸ್ ಎಟಿ ನ್ಯಾನೋ ಉಪಗ್ರಹವನ್ನು ಮೊಟ್ಟಮೊದಲ ಬಾರಿಗೆ ಸಂಪೂರ್ಣವಾಗಿ ತಾವೇ ವಿನ್ಯಾಸಗೊಳಿಸಿ, ಅಭಿವೃದ್ಧಿಗೊಳಿಸಿದ ನಾರಿಯರು, 2025ರ ವಿಶ್ವಕಪ್ ಕ್ರಿಕೆಟ್‌ನಲ್ಲಿ ಚೊಚ್ಚಲ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡ ಭಾರತದ ತನುಜೆಯರು ಪುರುಷ ಪ್ರಾಬಲ್ಯತೆಗೆ ಸೆಡ್ಡು ಹೊಡೆದು ಭಾರತದ ಇತಿಹಾಸಕ್ಕೆ ಹೊಸ ಅಧ್ಯಾಯಗಳನ್ನು ಬರೆದಿದ್ದಾರೆ. ಹೀಗೆ ಒಂದೆಡೆ ನೂರಾರು ಮಹಿಳೆಯರು ತಮ್ಮ ಸಾಧನೆಯ ಹಾದಿಯಲ್ಲಿ ಬರುವ ಹಲವಾರು ಅಡೆತಡೆ, ಸವಾಲುಗಳನ್ನು ಎದುರಿಸಿ ಮೆಟ್ಟಿನಿಂತು ವಿಜ್ಞಾನ, ಕಲೆ, ಸಾಹಿತ್ಯ, ಕ್ರೀಡೆ ಮುಂತಾದ ಕ್ಷೇತ್ರಗಳಲ್ಲಿ ಛಾಪನ್ನು ಮೂಡಿಸುತ್ತಾ ತಮ್ಮ ದಿಗಂತವನ್ನು ವಿಸ್ತರಿಸಿಕೊಳ್ಳುತ್ತಿದ್ದಾರೆ. ಸಮಾನ ಅವಕಾಶ ದೊರೆತರೆ ತಾವೂ ಸಹ ಸಮಾಜಕ್ಕೆ ಕೊಡುಗೆ ನೀಡುವುದರಲ್ಲಿ ಹಿಂದೆ ಬೀಳುವುದಿಲ್ಲ ಎಂದು ಸಾಬೀತು ಪಡಿಸುತ್ತಲೇ ಇದ್ದಾರೆ. ಇನ್ನೊಂದೆಡೆ ಲಕ್ಷಾಂತರ ಹೆಣ್ಣು ಮಕ್ಕಳಿಗೆ ಈ 21ನೇ ಶತಮಾನದಲ್ಲೂ ಜ್ಞಾನದ ಬಾಗಿಲು ತೆರೆದಿಲ್ಲ. ಆರೋಗ್ಯ ಮತ್ತು ಉದ್ಯೋಗ ಭದ್ರತೆಯಂತೂ ಕನಸಿನ ಮಾತಾಗಿದೆ. ಜೊತೆಗೆ ಪ್ರತಿನಿತ್ಯ ಅತ್ಯಾಚಾರ, ದೌರ್ಜನ್ಯ, ಹಿಂಸೆ, ಅಗೌರವ, ಅಪಮಾನಗಳಿಗೆ ಸಾವಿರಾರು ಮಹಿಳೆಯರು ಬಲಿಯಾಗುತ್ತಿದ್ದಾರೆ. ಈ ಮಹಿಳೆಯರ ಆಕ್ರಂದನಗಳು ನಾಗರಿಕವೆನಿಸಿಕೊಂಡಿರುವ ನಮ್ಮ ಸಮಾಜದ ಅಂತ:ಸಾಕ್ಷಿಯ ಕದವನ್ನು ಮತ್ತೆ ಮತ್ತೆ ತಟ್ಟಿ ಇಂತಹ ವಿಕೃತ ಪಾತಕಗಳಿಗೆ ಕೊನೆ ಯಾವಾಗ ಎಂದು ಕೇಳುತ್ತಿವೆ ಎಂದರು.

ಇಂತಹ ಅಮಾನವೀಯ ವ್ಯವಸ್ಥೆಯ ವಿರುದ್ಧ ನಾವೆಲ್ಲ ಸುದೀರ್ಘವಾದ ಸಂಗ್ರಾಮಕ್ಕೆ ಸಜ್ಜಾಗಬೇಕಾಗಿದೆ. ಸಕಲ ಮಹಿಳೆಯರನ್ನು ಜಾಗೃತರನ್ನಾಗಿಸಿ ಸಂಘಟಿಸಬೇಕಾಗಿದೆ.

ಈ ಹಿನ್ನೆಲೆಯಲ್ಲಿ ಅಖಿಲ ಭಾರತ ಮಹಿಳಾ ಸಾಂಸ್ಕೃತಿಕ ಸಂಘಟನೆ ಎಐಎಂಎಸ್ ಎಸ್ ಯ ಕರ್ನಾಟಕ ರಾಜ್ಯ ಸಮಿತಿಯು 25 ನವೆಂಬರ್ 2025ರಿಂದ 25 ಮಾರ್ಚ್ 2026ರವರೆಗೆ ಮಹಿಳೆಯರು ಮತ್ತು ಮಕ್ಕಳ ಮೇಲಿನ ದೌರ್ಜನ್ಯಗಳ ವಿರುದ್ಧ ರಾಜ್ಯವ್ಯಾಪಿ ಆಂದೋಲನದ ಭಾಗವಾಗಿ ಸಹಿ ಸಂಗ್ರಹಣಾ ಅಭಿಯಾನ, ಪ್ರತಿಭಟನೆಗಳು, ಸಭೆ–ಸಮಾವೇಶಗಳು, ಮೆರವಣಿಗೆ, ಗುಂಪು ಚರ್ಚೆಗಳು, ಸಿನಿಮಾ ಪ್ರದರ್ಶನ, ಸೂಕ್ತಿ ಮತ್ತು ಛಾಯಾಚಿತ್ರ ಪ್ರದರ್ಶನ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಎಲ್ಲಾ ಸ್ತರದ ಮಹಿಳೆಯರನ್ನು ಜಾಗೃತಗೊಳಿಸುವ ಕಾರ್ಯಕೈಗೊಂಡಿದೆ. ಇದರ ಭಾಗವಾಗಿ ಜನವರಿ 7, 2026 ರಂದು ಗಾಂಧಿಭವನ, ಬೆಂಗಳೂರಿನಲ್ಲಿ ರಾಜ್ಯಮಟ್ಟದ ಸಮಾವೇಶ ಹಮ್ಮಿಕೊಳ್ಳಲಾಗುತ್ತಿದೆ.

2026ರ ಜನವರಿ 7ರ ಸಮಾವೇಶಕ್ಕೆ ಅತಿಥಿಗಳಾಗಿ ಶ್ರೀಮತಿ ಹೇಮಲತಾ ಮಹಿಷಿ (ಹಿರಿಯ ವಕೀಲರು, ಬರಹಗಾರರು, ಬೆಂಗಳೂರು) ಡಾ: ಶ್ರೀದೇವಿ ಕುಮಾರ್ (ಮನಶಾಸ್ತ್ರ ವಿಭಾಗ, ನಿಮ್ಹಾನ್ಸ್, ಬೆಂಗಳೂರು)

ಡಾ: ಸುಧಾಕಾಮತ್ (ಪ್ಲಾಸ್ಟಿಕ್ ಸರ್ಜನ್, ಬೆಂಗಳೂರು) ಪ್ರೊ. ಸಬಿಹಾ ಭೂಮಿಗೌಡ (ಅಕ್ಕ ಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಮಾಜಿ ಉಪಕುಲಪತಿ, ವಿಜಯಪುರ) ಪ್ರೊ. ರಾಮೇಶ್ವರಿ ವರ್ಮಾ (ಪ್ರಸಿದ್ಧ ರಂಗಕರ್ಮಿ, ಮೈಸೂರು) ರಾಜ್ಯಾದಾದ್ಯಂತ ಎಲ್ಲಾ ಜಿಲ್ಲೆಗಳಿಂದ ಮಹಿಳೆಯರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಸಮಾವೇಶದಲ್ಲಿ ಮಹಿಳೆಯರ ಮತ್ತು ಹೆಣ್ಣು ಮಕ್ಕಳ ಭದ್ರತೆಗೆ ಸೂಕ್ತ ಕ್ರಮ ಕೈಗೊಳ್ಳಿ, ಅತ್ಯಾಚಾರಗಳ ಪ್ರಕರಣಗಳನ್ನು ತ್ವರಿತವಾಗಿ ನಡೆಸಲು ಫಾಸ್ಟ್ ಟ್ರ್ಯಾಕ್ ಕೋರ್ಡ್‌ಗಳನ್ನು ಸ್ಥಾಪಿಸಿ. ಅಪರಾಧಿಗಳಿಗೆ ನಿದರ್ಶನೀಯ ಶಿಕ್ಷೆ ನೀಡಿ ಅಶ್ಲೀಲ ಸಿನಿಮಾ–ಸಾಹಿತ್ಯ, ಜಾಹೀರಾತು, ವೆಬ್ಸೈಟ್, ಮದ್ಯ–ಮಾದಕ ವಸ್ತುಗಳನ್ನು ನಿಷೇಧಿಸಿ, ಶಾಲಾಮಟ್ಟದಿಂದಲೇ ಶಿಕ್ಷಣ ವ್ಯವಸ್ಥೆಯಲ್ಲಿ ಸಮಾಜಕ್ಕೆ ಕೊಡುಗೆ ನೀಡಿದ ಆದರ್ಶಪ್ರಾಯ ಚೇತನಗಳ ಚರಿತ್ರೆಯನ್ನು ಲಿಂಗಭೇದವಿಲ್ಲದೆ ಎಲ್ಲಾ ಮಕ್ಕಳಿಗೂ ಕಡ್ಡಾಯವಾಗಿ ಬೋಧಿಸಿ, ಮಹಿಳೆಯರ ಮತ್ತು ಮಕ್ಕಳ ಕಳ್ಳಸಾಗಾಣಿಕೆಯನ್ನು ತಡೆಗಟ್ಟಿ., ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರದ ಖಾಸಗೀಕರಣ ನಿಲ್ಲಿಸಿ. ಎಲ್ಲಾ ಮಹಿಳೆಯರಿಗೂ ಶಿಕ್ಷಣ, ಆರೋಗ್ಯ ಮತ್ತು ಉದ್ಯೋಗವನ್ನು ಖಾತ್ರಿಪಡಿಸಿ. , ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ಎಲ್ಲ ಸಂಸ್ಥೆಗಳಲ್ಲಿ ಲೈಂಗಿಕ ಕಿರುಕುಳ ವಿರೋಧಿ ಸಮಿತಿಗಳನ್ನು ಸ್ಥಾಪಿಸಿ.ಇತ್ಯಾದಿಗಳ ಹಕ್ಕೊತ್ತಾಯ ಮಾಡಲಾಗುವುದು ಎಂದರು

ಈ ಸಂದರ್ಭದಲ್ಲಿ ಎಐಎಂಎಎನ ಜಿಲ್ಲಾಧ್ಯಕ್ಷರಾದ ಕೆ. ಎಂ. ಈಶ್ವರಿ, ಪದಾಧಿಕಾರಿಗಳಾದ ಪದ್ಮ, ಗಿರಿಜಾ, ಸೌಮ್ಯ, ಅಭಿಲಾಷ, ಪಾರ್ವತಮ್ಮ, ಸುಜಾತ, ವಿದ್ಯಾ ಉಪಸ್ಥಿತರಿದ್ದರು.

# ನರೋಣದಲ್ಲಿ ಪಲ್ಸ್ ಪೋಲಿಯೋಗೆ ಗುರು ಮಹಾಂತ ಶ್ರೀ ಚಾಲನೆ



**ಆಳಂದ್: ಡಿ.23–**ರಾಷ್ಟ್ರೀಯ ಪಲ್ಸ್ ಪೊಲಿಯೋ ಕಾರ್ಯಕ್ರಮಕ್ಕೆ ತಾಲೂಕು ನರೋಣ ಗ್ರಾಮದ ಅಂಗನವಾಡಿ ಕೇಂದ್ರ ಸಂಖ್ಯೆ–5ರಲ್ಲಿ ಚಾಲನೆ ನೀಡಲಾಯಿತು.

ಗ್ರಾಮದ ಮಹಾಂತೇಶ್ವರ್ ಮಠದ ಮಠಾಧಿಪತಿ ಶ್ರೀ ಗುರುಮಹಾಂತ ಸ್ವಾಮೀಜಿಗಳು ಕಾರ್ಯಕ್ರಮವನ್ನು ಉದ್ಘಾಟಿಸಿ ಐದು ವರ್ಷದೊಳಗಿನ ಮಕ್ಕಳಿಗೆ ಪೊಲಿಯೊ ಹನಿ ಹಾಕುವ ಮೂಲಕ ಅಭಿಯಾನಕ್ಕೆ ಅಧಿಕೃತ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸ್ವಾಮೀಜಿಗಳು, ಮಕ್ಕಳ ಆರೋಗ್ಯವೇ ದೇಶದ ಭವಿಷ್ಯವಾಗಿದ್ದು, ಪೊಲಿಯೊ ಮುಕ್ತ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಹೇಳಿದರು. ಪೋಷಕರು ಯಾವುದೇ ಅಲಕ್ಷ್ಯ ತೋರದೇ ತಮ್ಮ ಮಕ್ಕಳಿಗೆ ಪೊಲಿಯೊ ಲಸಿಕೆ ಹಾಕಿಸಬೇಕು ಎಂದು ಅವರು ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ಗ್ರಾಮದ ಮುಖಂಡರಾದ ಬಾಬು ವಾಲಿ, ಮಲ್ಕಜಪ್ಪ ಬೋಳಶೆಟ್ಟಿ, ಶರಣಬಸಪ್ಪ ಸಾವಳಗಿ ಉಪಸ್ಥಿತರಿದ್ದರು. ಆರೋಗ್ಯ ಇಲಾಖೆಯ ಸಮುದಾಯ ಆರೋಗ್ಯ ಅಧಿಕಾರಿ ಶಿವಾನಂದ ತಂಬಾಕೆ, ಭಾರತಿಬಾಯಿ, ಅಶೋಕ್ ಪೂಜಾರಿ, ಅಂಗನವಾಡಿ ಶಿಕ್ಷಕಿ ಹಾಗೂ ಆಶಾ ಕಾರ್ಯಕರ್ತೆಯರು ಸಕ್ರಿಯವಾಗಿ ಭಾಗವಹಿಸಿ ಕಾರ್ಯ ಕ್ರಮವನ್ನು ಯಶಸ್ವಿ ಗೊಳಿಸಿದರು.ಗ್ರಾಮದ ಪೋಷಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಮಕ್ಕಳಿಗೆ ಪೊಲಿಯೊ ಹನಿ ಹಾಕಿಸುವ ಮೂಲಕ ರಾಷ್ಟ್ರೀಯ ಪಲ್ಸ್ ಪೊಲಿಯೋ ಕಾರ್ಯಕ್ರಮಕ್ಕೆ ಉತ್ತಮ ಬೆಂಬಲ ವ್ಯಕ್ತಪಡಿಸಿದರು.

# ಮಾದಿಗ ಸಮಾಜದ ಯುವಜನರು ಎಚ್ಚೆತ್ತುಕೊಳ್ಳಿ



**ಹುಮನಾಬಾದ್:ಡಿ.23–**ಸೋನಿಯಾ ಗಾಂಧಿಯವರು ತಮ್ಮ ಪುತ್ರ ರಾಹುಲ್ ಗಾಂಧಿಯನ್ನು ಪ್ರಧಾನಿಯನ್ನಾಗಿಸಲು ಯತ್ನಿಸುತ್ತಿದ್ದಾರೆ. ಆದರೆ ಇದಕ್ಕಾಗಿ ನಿಮ್ಮ ತಾಯಂದಿರು ನಿಮಗೆ ಜನ್ಮ ನೀಡಿಲ್ಲ ಎಂಬುದನ್ನು ಮಾದಿಗ ಸಮುದಾಯದ ಯುವಜನರು ಅರ್ಥೈಸಿಕೊಳ್ಳಬೇಕು' ಎಂದು ಸಂಸದ ಗೋವಿಂದ ಕಾರಜೋಳ ಹೇಳಿದರು.

ತಾಲ್ಲೂಕಿನ ಮಾಣಿಕ ನಗರದ ಮಾಣಿಕಸೌಧದಲ್ಲಿ ಆಯೋಜಿಸಿದ್ದ 'ಮತ ಬ್ಯಾಂಕ್ ರಾಜಕೀಯಕ್ಕೆ ಬಲಿಯಾಯಿತೆ ಒಳಮೀಸಲಾತಿ' ಮುನ್ನೋಟದ ವಿಚಾರ ಸಂಕಿರಣ ಹಾಗೂ ಶಿವಶರಣರ ಮಾದರ ಚನ್ನಯ್ಯ ಅವರ 956ನೇ ಜಯಂತಿ ಕಾರ್ಯಕ್ರಮದಲ್ಲಿ ಅವರು

ಮಾತನಾಡಿದರು. 2018ರ ಚುನಾವಣೆಯಲ್ಲಿ ಮಾದಿಗರು ಓಟ ನೀಡಿಲ್ಲ ಅದಕ್ಕೆ ಕಾಂಗ್ರೆಸ್ ಸೋತಿದೆ ಎಂದು ಸಿದ್ದರಾಮಯ್ಯ ಒಪ್ಪಿ ಕೊಂಡಿದ್ದರು. 2023ರ ಚುನಾವಣೆಯಲ್ಲಿ ಮಾದಿಗರೆ ಓಟು ಹಾಕಿ ನಿಮಗೆ ಒಳಮಿಸಲಾತಿ ಲಾಭ ನೀಡುತ್ತೇವೆ ಎಂದಿದ್ದರು. ಆದರೆ ಇನ್ನೂವರೆಗೂ ನೀಡಿಲ್ಲ. ಕಾಂಗ್ರೆಸ್‌ನವರಿಗೆ ಓಟ ಹಾಕಲು ನಾವು ಹುಟ್ಟಿಲ್ಲ, ಅವರ ಮೊಸಕ್ಕೆ ಬಲಿಯಾಗಬೇಡಿ ಎಂದರು.

ಶಾಸಕ ಡಾ.ಸಿದ್ದು ಪಾಟೀಲ್ ಮಾತನಾಡಿ, ಕಾಂಗ್ರೆಸ್ ಸರಕಾರಗಳ ಕಾಲದಲ್ಲಿ ಸಮಾಜವನ್ನು ತುಳಿಯುವ ಕೆಲಸ ನಡೆದಿದೆ. ಕಾರ್ಯಕರ್ತರಿಗೆ ಕಾರ್ಯಕರ್ತರಿಗೆ ಜೈಕಾರಕ್ಕೆ ಸೀಮಿತ ಮಾಡಿ ಅವರ ಹಕ್ಕು ನೀಡುತ್ತಿಲ್ಲ. ಮುಖಂಡರು ಜೈಕಾರಕ್ಕೆ ಸೀಮಿತವಾಗಬಾರದು ಎಂದು. ಹೇಳಿದರು

ಬಸವಕಲ್ಯಾಣದ ಶಿವಶರಣ ಮಾದಾರ ಚನ್ನಯ್ಯ ಅರಿವು ಪೀಠದ ಶ್ರೀಕಾಂತ ಸ್ವಾಮೀಜಿ, ಶಾಸಕ ಬಸವರಾಜ ಮತ್ತಿಮೂಡ, ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ್, ಉದ್ಯಮಿ ಸಂತೋಷ ಪಾಟೀಲ್, ದಲಿತ ಮಾದಿಗ ಸಮನ್ವಯ ಸಮಿತಿಯ ಜಿಲ್ಲಾಧ್ಯಕ್ಷ ಪರಮೇಶ್ವರ ಕಾಳಮಂದರಗಿ, ಮಾದಿಗ ಮಹಾಸಭಾ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾಧ್ಯಕ್ಷ ರವಿ ನಿಜಾಮಪುರೆ, ಪಪ್ಪುರಾಜ , ಸೇರಿದಂತೆ ಅನೇಕರು ಇದ್ದರು.

ಯುವ ಮಾರ್ಗ
www.yuvamarga.com Yuva Marga yuva_marga_

# ಡಿ.24ರಂದು ರಾಷ್ಟ್ರೀಯ ಗ್ರಾಹಕರ ದಿನಾಚರಣೆ

**ರಾಯಚೂರು ಡಿ,23–**ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಆಹಾರ, ನಾಗರಿಕ ಸರಬರಾಜು ಹಾಘೂ ಗ್ರಾಹಕರ ವ್ಯವಹಾರಗಳ ಇಲಾಖೆ, ಕಾನೂನು ಮಾಪನ ಶಾಸ್ತ್ರ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಗ್ರಾಹಕರ ದಿನಾಚರಣೆ–2025ರ ಕಾರ್ಯಕ್ರಮವನ್ನು ನಗರದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಭವನದಲ್ಲಿ ಡಿಸೆಂಬರ್ 24ರ ಬೆಳಿಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ

ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಕೆ.ವಿ.ಸುರೇಂದ್ರ ಕುಮಾರ್ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯರಾದ ಪ್ರಭುದೇವ್, ಜಿಲ್ಲಾ ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ಮಲ್ಲಿಕಾರ್ಜುನ, ವಕೀಲರಾದ ಗೌರೀಶ್ ಸೇರಿದಂತೆ ಇತರರು ಭಾಗಿಯಾಗಲಿದ್ದಾರೆ ಎಂದು ಆಹಾರ, ನಾಗರಿಕ ಸರಬರಾಜು ಹಾಘೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹಮದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಸಿಎಂ ವಿದ್ಯಾರ್ಥಿ ವೇತನ, ಶುಲ್ಕ ವಿನಾಯಿತಿಗೆ ಅರ್ಜಿ ಸಲ್ಲಿಕೆ ಅವಧಿ ಜನವರಿ 31ರವರೆಗೆ ವಿಸ್ತರಣೆ

**ರಾಯಚೂರು ಡಿ,23–**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿ ವೇತನ ಮತ್ತು ಶುಲ್ಕ ವಿನಾಯಿತಿ ಯೋಜನೆಗಳ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆ ಅವಧಿಯನ್ನು 2026ರ ಜನವರಿ 31ರವರೆಗೆ ವಿಸ್ತರಣೆ ಮಾಡಲಾಗಿದೆ.

ಪಿ.ಯು.ಸಿ ಮತ್ತು ಸಾಮಾನ್ಯ ಪದವಿ ಕೋರ್ಸುಗಳನ್ನು ಹೊರತುಪಡಿಸಿ ಉಳಿದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2025–26 ನೇ ಸಾಲಿಗೆ ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿ ವೇತನ, ಶುಲ್ಕ ಮರುಪಾವತಿ ಮತ್ತು ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಕಾರ್ಯಕ್ರಮಗಳ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು 31.01.2026 ರವರೆಗೆ ಪೋಷಕರು/ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕೆ ಸಂಸ್ಥೆಗಳ ಮನವಿಯ ಮೇರೆಗೆ ವಿಸ್ತರಿಸಲಾಗಿದ್ದು, ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಲು ತಿಳಿಸಿದೆ.

ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್ ಸೈಟ್ ವಿಳಾಸ: http:// ssp.postmatric.karnataka.gov.in/ ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಬೇಟಿ ನೀಡಬೇಕಾದ ವೆಬ್‌ಸೈಟ್ ವಿಳಾಸ: http:// bcwd.karnataka.gov.in ಇಲಾಖೆ ಸಹಾಯವಾಣಿ ದೂರವಾಣಿ ಸಂಖ್ಯೆ: 8050770004 ಅಥವಾ ಇಮೇಲ್: bcwdhelpline@gmail.com ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇ-ಮೇಲ್: postmatrichelp@karnataka.gov.in ದೂರವಾಣಿ ಸಂಖ್ಯೆ: 1902ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಯತಪ್ಪಿ ಬಾವಿಯಲ್ಲಿ ಬಿದ್ದು ವ್ಯಕ್ತಿ ಸಾವು

**ಕಲಬುರಗಿ,ಡಿ.23–**ಸ್ನಾನ ಮಾಡಲು ಹೋಗಿ ಆಯತಪ್ಪಿ ಬಾವಿಯಲ್ಲಿ ಬಿದ್ದು ವ್ಯಕ್ತಿಯೊಬ್ಬ ಮೃತಪಟ್ಟಿರುವ ಘಟನೆ ಹೀರಾಪುರದಲ್ಲಿ ನಡೆದಿದೆ.ಹೀರಾಪುರದ ಮಹಾಂತೇಶ ತಂದೆ ಭೀಮಶಾ ತಾಡಪಳ್ಳಿ (50) ಮೃತಪಟ್ಟವರು.ಇವರು ಹೀರಾಪುರದ ಬಾವಿಯಲ್ಲಿ ಸ್ನಾನ ಮಾಡಲೆಂದು ಹೋಗಿ ಆಯತಪ್ಪಿ ಬಿದ್ದು ಉಸಿರುಗಟ್ಟಿ ಸಾವನ್ನಪ್ಪಿದ್ದಾರೆ ಎಂದು ತಿಳಿದುಬಂದಿದೆ.

ಈ ಸಂಬಂಧ ಮೃತ ಮಹಾಂತೇಶ ತಾಡಪಳ್ಳಿ ಅವರ ಪುತ್ರ ಬಸವರಾಜ ತಾಡಪಳ್ಳಿ ಅಶೋಕ ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.

# ಪೋಲಿಯೋ ಲಸಿಕೆ ಅಭಿಯಾನ ಕಾರ್ಯಕ್ರಮ

ಯುವಮಾರ್ಗ ಸುದ್ದಿ



**ದೇವಸುಗೂರು,ಡಿ.23–** ಗ್ರಾಮದ ಶಾರದಾ ಮಹಿಳಾ ಸ್ವ ಸಹಾಯ ಸಂಘ ಜನತಾ ಕಾಲೋನಿ ದೇವಸುಗೂರು ಹಾಗೂ ಸ್ವಾಮಿ ವಿವೇಕಾನಂದ ಯೂಥ್ ಮೂವೆಮೆಂಟ್ ರಾಯಚೂರು ವತಿಯಿಂದ ಜನತಾ ಕಾಲೋನಿ ಯಲ್ಲಿ ಐದು ವರ್ಷದ ಒಳಗಿನ ಮಕ್ಕಳಿಗೆ ಪಲ್ಸ ಪೋಲಿಯೋ ಲಸಿಕೆ ಹಾಕುವ ಮತ್ತು ಲಸಿಕೆ ಕುರಿತು ಜಾಗೃತಿ ಕಾರ್ಯಕ್ರಮ ವನ್ನು ಮನೆ ಮನೆ ಭೇಟಿ ಮಾಡಿ ಸ್ಥಳೀಯ ಅಂಗನವಾಡಿ ಆಶಾ ಕಾರ್ಯಕ್ರತರೊಂದಿಗೆ ಸೇರಿ ಜಾಗೃತಿ ಅಭಿಯಾನ ಮೂಡಿಸುವ ಮಕ್ಕಳನ್ನು ಗುರುತಿಸಿ ಲಸಿಕೆ ಹಾಕುವ ಕಾರ್ಯಕ್ರಮ ನಡೆಸಲಾಯಿತು.

ಈ ಒಂದು ಕಾರ್ಯಕ್ರಮದಲ್ಲಿ ಸ್ಥಳೀಯ ಅಂಗನವಾಡಿ ಕಾರ್ಯಕರ್ತರಾದ ಶ್ರೀ ಮತಿ ಕನ್ಯಾಕುಮಾರಿ ರವರು ಹಾಗೂ ಸ್ಥಳೀಯ ಆಶಾ ಕಾರ್ಯಕ್ರತರಾದ ಶ್ರೀ ಮತಿ ಶರಣಮ್ಮ. ಹಾಗೂ ಶಾರದಾ ಮಹಿಳಾ ಸ್ವ ಸಹಾಯ ಸಂಘದ ಸದಶ್ಯರುಗಳಾದ ಶ್ರೀ ಮತಿ ಸೂಗಮ್ಮ.ರವರು ಮಗುವಿಗೆ ಲಸಿಕೆ ಹಾಕುವ ಮೂಲಕ ಕಾರ್ಯಕ್ರಮ ನಡೆಸಲಾಯಿತು. ಶ್ರೀದೇವಿ. ಶಂಬಾವಿ. ನವೀನ ಸರೋಜಮ್ಮ ಲಕ್ಷ್ಮಿ. ಅನಿತಾ ಹನುಮಂತಿ. ಸ್ವಾಮಿ ವಿವೇಕಾನಂದ ಯೂಥ್ ಮೂವಮೆಂಟ್ ಸಂಸ್ಥೆಯ ಸಂಯೋಜಕರಾದ ವಿನಾಯಕ. ಲಿಂಗಪ್ಪ. ಕಾರ್ಯಕ್ರಕ್ರಮದಲ್ಲಿ ಭಾಗವಹಿಸಿದ್ದರು

# ವಿಕಲಚೇತನರ ಸಬಲೀಕರಣಕ್ಕೆ ಎಲ್ಲರ ಸಹಕಾರ ಅಗತ್ಯ: ಅಧ್ಯಕ್ಷ ವೈ. ಬೂಪನಗೌಡ

ಯುವಮಾರ್ಗ ಸುದ್ದಿ




**ಸಿರವಾರ,ಡಿ.23–** ಪಟ್ಟಣದ ಪಟ್ಟಣ ಪಂಚಾಯಿತಿ ಕಾರ್ಯಾಲಯದಲ್ಲಿ ಜಿಲ್ಲಾಧಿಕಾರಿಗಳ ಕಾರ್ಯಾಲಯ ನಗರಾಭಿವೃದ್ಧಿ ಕೋಶ, ರಾಯಚೂರು, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ರಾಯಚೂರು ಹಾಗೂ ಪಟ್ಟಣ ಪಂಚಾಯತ್ ಕಾರ್ಯಾಲಯ, ಸಿರವಾರ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಹಾಗೂ ವಿಕಲಚೇತನರ ಸಮನ್ವಯ (ವಾರ್ಡ್) ಸಭೆ ಯಶಸ್ವಿಯಾಗಿ ನಡೆಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪಟ್ಟಣ ಪಂಚಾಯತಿ ಅಧ್ಯಕ್ಷ ವೈ. ಬೂಪನಗೌಡ ಅವರು ವಹಿಸಿಕೊಂಡು ಮಾತನಾಡಿ, ವಿಕಲಚೇತನರ ಸಬಲೀಕರಣಕ್ಕೆ ಸರ್ಕಾರದ ವಿವಿಧ ಯೋಜನೆಗಳನ್ನು ಸಮರ್ಪಕವಾಗಿ ತಲುಪಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು. ವಿಕಲಚೇತನರು ಸಮಾಜದ ಮುಖ್ಯವಾಹಿನಿಗೆ ಸೇರುವಂತೆ ಅಗತ್ಯ ಸೌಲಭ್ಯಗಳು, ಮಾಹಿತಿ ಮತ್ತು ಬೆಂಬಲ ನೀಡಬೇಕೆಂದು ಅವರು ಹೇಳಿದರು.


ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯತಿ ಉಪಾಧ್ಯಕ್ಷೆ ಲಕ್ಷ್ಮಿದೇವಿ, ಸಮುದಾಯ ಸಂಘಟಕ ಹಂಪಯ್ಯ ಪಾಟೀಲ್, ಆರ್.ಐ ಗೋಪಾಲ್, ಸಂಕಲ್ಪ ವಿಕಲಚೇತನರ ಒಕ್ಕೂಟದ ಗೌರವಾಧ್ಯಕ್ಷ ದೇಸಾಯಿ ದೊತರಬಂಡಿ, ಸಂಕಲ್ಪ ವಿಕಲಚೇತನರ ಒಕ್ಕೂಟದ ಜಿಲ್ಲಾಧ್ಯಕ್ಷ ಶಿವಕುಮಾರ್ ಚಲ್ಮಲ್, ಗ್ರಾಮೀಣ ಪುನರ್ವಸತಿ ಕಾರ್ಯಕರ್ತ ನಂದಕುಮಾರ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಸಭೆಯಲ್ಲಿ ವಿಕಲಚೇತನರ ಹಕ್ಕುಗಳು, ಸರ್ಕಾರದಿಂದ ಲಭ್ಯವಿರುವ ಸೌಲಭ್ಯಗಳು, ಪಿಂಚಣಿ, ಗುರುತಿನ ಚೀಟಿ, ಆರೋಗ್ಯ, ಶಿಕ್ಷಣ ಹಾಗೂ ಉದ್ಯೋಗಕ್ಕೆ ಸಂಬಂಧಿಸಿದ ವಿಷಯಗಳ ಬಗ್ಗೆ ಸಮಗ್ರ ಚರ್ಚೆ ನಡೆಯಿತು. ವಿಕಲಚೇತನರು ಮತ್ತು ಅವರ ಪಾಲಕರು ತಮ್ಮ ಸಮಸ್ಯೆಗಳು ಹಾಗೂ ಬೇಡಿಕೆಗಳನ್ನು ಅಧಿಕಾರಿಗಳ ಗಮನಕ್ಕೆ ತಂದರು. ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಸಮಸ್ಯೆಗಳಿಗೆ ಸ್ಪಂದಿಸಿ ಸೂಕ್ತ ಪರಿಹಾರ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮವು ವಿಕಲಚೇತನರಲ್ಲಿ ಆತ್ಮವಿಶ್ವಾಸ, ಜಾಗೃತಿ ಮತ್ತು ಸಬಲೀಕರಣದ ಸಂದೇಶವನ್ನು ನೀಡುವ ಮೂಲಕ ಅತ್ಯಂತ ಅರ್ಥಪೂರ್ಣವಾಗಿ ನೆರವೇರಿತು.

### ಮಸ್ಕಿ ತಾಲೂಕು ಕರ್ನಾಟಕ ಪ್ರದೇಶ ಬಂಜಾರ ಸೇವಾ ಸಂಘದ ನೂತನ ಪದಾಧಿಕಾರಿ ಆಯ್ಕೆ ಸಭೆ

# ಸಮಾಜದ ಸಂಘಟನೆಗೆ ಬದ್ಧ: ಅಮರೇಶ ನಾಯ್ಕ ಅಂತರಗಂಗಿ



ಯುವಮಾರ್ಗ ಸುದ್ದಿ

**ಮಸ್ಕಿ,ಡಿ.23–**ವೈಯಕ್ತಿಕ ಕೆಲಸಗಳನ್ನು ಬದಿಗೊತ್ತಿ ಸಮಾಜದ ಸಂಘಟನೆಗೆ ಬದ್ಧರಾಗಬೇಕೆಂದು ಕರ್ನಾಟಕ ಪ್ರದೇಶ ಬಂಜಾರ ಸೇವಾ ಸಂಘದ ಜಿಲ್ಲಾಧ್ಯಕ್ಷ ಅಮರೇಶ ನಾಯ್ಕ ಅಂತರಗಂಗಿ ಅವರು ಹೇಳಿದರು.

ಪಟ್ಟಣದ ಭ್ರಮರಾಂಭ ಕಲ್ಯಾಣ ಮಂಟಪದಲ್ಲಿ ಸೋಮವಾರ ನಡೆದ ಕರ್ನಾಟಕ ಪ್ರದೇಶ ಬಂಜಾರ ಸೇವಾ ಸಂಘದ ನೂತನ ಪದಾಧಿಕಾರಿ ಆಯ್ಕೆ ಸಭೆಯಲ್ಲಿ ಮಾತನಾಡಿದ ಅವರು, ಸಂಘದ ನೂತನ ಪದಾಧಿಕರಿಗಳು ಸಮುದಾಯ ಸೇವಾ ಮನೋಭಾವ ಬೆಳೆಸಿಕೊಳ್ಳಬೇಕು, ಪ್ರಾಮಾಣಿಕರಾಗಿ ಕೆಲಸ ಮಾಡುತ್ತ ಎಲ್ಲರ ನಂಬಿಕೆಗೆ ಪಾತ್ರರಾಗಬೇಕೆಂದು ಹೇಳಿದರು.

ಬಂಜಾರ ಸಮಾಜದವರು ಹೊಟ್ಟೆಪಾಡಿಗಾಗಿ ಗುಳೆಗೆ ತೆರಳುತ್ತಾರೆ ಅವರ ಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ.ಅಂತಹ ಮಕ್ಕಳನ್ನು ಗುರುತಿಸಿ ಶಿಕ್ಷಣ ಕೊಡಿಸುವ ಕೆಲಸ ಸರ್ಕಾರ ಮಾಡಬೇಕಿದೆ. ಬಂಜಾರ ಸಮಾಜ ರಾಜಕೀಯವಾಗಿ ತೀರಾ ಹಿಂದುಳಿದಿದೆ. ಎಲ್ಲಾರು ಶಿಕ್ಷಣವಂತರಾಗಿ ರಾಜಕೀಯವಾಗಿ ಹೆಚ್ಚು ಗುರುತಿಸಿಕೊಳ್ಳಬೇಕೆಂದು ಹೇಳಿದರು.

**ನೂತನ ಪದಾಧಿಕಾರಿಗಳ ಆಯ್ಕೆ:** ಕರ್ನಾಟಕ ಪ್ರದೇಶ ಬಂಜಾರ ಸೇವಾ ಸಂಘದ ಮಸ್ಕಿ ತಾಲೂಕ ಘಟಕದ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಜಂಬಣ್ಣಚವ್ಹಾಣ(ಗೌರವಧ್ಯಕ್ಷ) ಶ್ರೀನಿವಾಸ ಚವ್ಹಾಣ (ಅಧ್ಯಕ್ಷ) ವಹಾನಪ್ಪ ಅಡವಿಭಾವಿ(ಉಪಾಧ್ಯಕ್ಷ) ಪೂಲಪ್ಪ ಮೆದಕಿನಾಳ(ಉಪಾಧ್ಯಕ್ಷ) ಶೇಟಪ್ಪ ಮೂಡಲದಿನ್ನಿ (ಉಪಾಧ್ಯಕ್ಷ) ವಿಠಲ ಕೆಳೂತ್(ಪ್ರಧಾನ ಕಾರ್ಯದರ್ಶಿ)

ಶೇಖರ ಪಿ ರಾಠೋಡ(ಖಜಾಂಚಿ) ರಾಮಚಂದ್ರ ದೇಸಾಯಿ ಬೋಗಾಪೂರ(ಸಂಘಟನಾ ಕಾರ್ಯದರ್ಶಿ) ಮೌನೇಶ ಪವಾರ ಜಕ್ಕೇರಮಡು(ಸಂಘಟನಾ ಕಾರ್ಯದರ್ಶಿ) ಶಂಕರ ಪಮ್ಮಾರ(ಸಂಘಟನಾ ಕಾರ್ಯದರ್ಶಿ) ದುರ್ಗೇಶ ಸುಲ್ತಾನಪುರ( ಸಂಘಟನಾ ಕಾರ್ಯದರ್ಶಿ) ಮೌನೇಶ ವೆಂಕಟಾಪೂರ ( ಸಂಘಟನಾ ಕಾರ್ಯದರ್ಶಿ) ತಿಪ್ಪಣ್ಣ( ಸಂಘಟನಾ ಕಾರ್ಯದರ್ಶಿ) ಶೇಖರಪ್ಪ ನಾಯ್ಕ( ಸಂಘಟನಾ ಕಾರ್ಯದರ್ಶಿ) ಧರಿಯಪ್ಪ ಹಡಗಲಿ ಅವರನ್ನು ಸಂಘಟನಾ ಕಾರ್ಯದರ್ಶಿ ಯನ್ನಾಗಿ ಆಯ್ಕೆ ಮಾಡಲಾಯಿತು. ನೀಲಪ್ಪ,ವೆಂಕಟೇಶ, ಆನಂದ ಸೊಂಪೂರು,ಕೃಷ್ಣಪ್ಪ ರಾಠೋಡ, ರಾಮಣ್ಣ ನಾಯ್ಕ, ಶ್ರೀನಿವಾಸ, ಶೇಖರ ಅವರನ್ನು ಸಂಘದ ಸದಸ್ಯರನ್ನಾಗಿ ಆಯ್ಕೆ ಮಾಡಲಾಯಿತು. ಹಾಗೂ ಮಹಿಳಾ ಘಟಕದ ಅಧ್ಯಕ್ಷರಾಗಿ ಅಕ್ಕಮಹಾದೇವಿ ಅವರನ್ನು ಅಯ್ಕೆ ಮಾಡಲಾಯಿತು ಈ ಸಂದರ್ಭದಲ್ಲಿ ಸಮಾಜದ ಹಿರಿಯ ಮುಖಂಡ ಭೀಮಶಪ್ಪ ಪೂಜಾರಿ, ಜಿಲ್ಲಾ ಉಪಾಧ್ಯಕ್ಷ ದೇವಪ್ಪ ಜಾಧವ, ಪೋಮಾನಾಯ್ಕ, ಮೀಠಪ್ಪ, ಶೇಖರ ಮಟ್ಟೂರು, ನೀಲಪ್ಪ ಪವಾರ, ಲಿಂಗಸ್ಗೂರು ಘಟಕದ ಅಧ್ಯಕ್ಷ ಶರಣಪ್ಪ ಜಾಧವ, ಸಿಂಧನೂರು ಘಟಕದ ಅಧ್ಯಕ್ಷ ಈಶಪ್ಪ ಜಾಧವ, ಶಂಕರ ಪವಾರ ಸೇರಿದಂತೆ ಇನ್ನಿತರಿದ್ದರು

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

### ವಿಜಯ ಪಬ್ಲಿಕ್ ಶಾಲೆಯಲ್ಲಿ ಹಳ್ಳಿ ಹಬ್ಬ ಕೃಷಿ ಸಂಭ್ರಮ

# ಮೌಲ್ಯಯುತ ಶಿಕ್ಷಣ ಅವಶ್ಯಕ:ಪತ್ರಕರ್ತ ಚಂದ್ರಶೇಖರ



ಯುವಮಾರ್ಗ ಸುದ್ದಿ

**ಸಿಂಧನೂರು,ಡಿ.23–** ಸಂಸ್ಕೃತಿ ಉಳಿಸುವ ಕೆಲಸ ಪ್ರತಿಯೊಬ್ಬರಿಂದ ಆಗಬೇಕು, ಇದರ ಜೊತೆಗೆ ಮೌಲ್ಯಯುತ ಶಿಕ್ಷಣ ಅವಶ್ಯಕತೆಯಿದೆ ಎಂದು ಜಿಲ್ಲಾ ಪತ್ರಕರ್ತ ಸಂಘದ ಕಾರ್ಯಕಾರಿ ಸದಸ್ಯ ಚಂದ್ರಶೇಖರ ಯರದಿಹಾಳ ಹೇಳಿದರು.

ನಗರದ ವಾರ್ಡ್ ನಂಬರ್ 13ರಲ್ಲಿ ಇರುವ ವಿಜಯ ಪಬ್ಲಿಕ್ ಶಾಲೆಯಲ್ಲಿ ರೈತರ ದಿನಾಚರಣೆಯ ನಿಮಿತ್ಯ ಹಮ್ಮಿಕೊಳ್ಳಲಾಗಿದ್ದ ಹಳ್ಳಿ ಹಬ್ಬ ಕೃಷಿ ಸಂಭ್ರಮ ವಿಶಿಷ್ಟ ಕಾರ್ಯಕ್ರಮದಲ್ಲಿ ಮಂಗಳವಾರ ಮಾತನಾಡಿ, ಗುಣ ಮಟ್ಟದ ಶಿಕ್ಷಣ ಇಂದಿನ ದಿನಮಾನದಲ್ಲಿ ಅವಶ್ಯಕತೆ ಇದೆ. ಆಗ ಮಾತ್ರ ಶಿಕ್ಷಣ ಸಂಸ್ಥೆಗಳು ಬೆಳೆಯಲು ಸಾಧ್ಯವಾಗುತ್ತದೆ.

ಇಂದಿಗೂ ಸಂಸ್ಕೃತಿ ತಿಳಿಯಬೇಕಾದರೆ ಹಳ್ಳಿಗಳಲ್ಲಿ ನೋಡುವಂತದ್ದು ಹಾಗಿದೆ, ಪ್ರತಿಯೊಂದು ಹಬ್ಬ ಸಡಗರ ಸಂಭ್ರಮದಿಂದ ಆಚರಿಸುವ ಕೆಲಸ ಹಳ್ಳಿಗಳಲ್ಲಿ ಆಗುತ್ತದೆ. ಅದೇ ತರ ನಗರದಲ್ಲಿ ಇನ್ನು ಹೆಚ್ಚು ಹೆಚ್ಚು ಸಂಭ್ರಮ ಹಬ್ಬಗಳು ಆದರೆ ಮತ್ತಷ್ಟು ಸಂಸ್ಕೃತಿ ಉಳಿಸಿ ಬೆಳೆಸಲು ಸಾಧ್ಯವಾಗುತ್ತದೆ ಎಂದರು.

ನಿವೃತ್ತಿ ಶಿಕ್ಷಕ ವೆಂಕನಗೌಡ ವಟಗಲ್ ಮಾತನಾಡಿ, ಹಿಂದಿನ ಕಾಲದ ಪದ್ಧತಿಗಳು ಈಗ ಕ್ಷೀಣಿಸುವ ಹಂತಕ್ಕೆ ತಲುಪಿದೆ. ಆಗ ಹಳ್ಳಿಯಲ್ಲಿ ವೈಶಿಷ್ಟತೆಯ ವೇಷ ಭೂಷಣಗಳು ಮತ್ತು ಅಕ್ಕ ಪಕ್ಕದವರು ಸಡಗರ ಸಂಭ್ರಮದಿಂದ ಯಾವುದೇ ಕಾರ್ಯಕ್ರಮವಿರಲಿ ಆಚರಿಸುವ ಕೆಲಸವಾಗುತ್ತಿತ್ತು. ಹಳ್ಳಿಗಳಲ್ಲಿ ಇನ್ನೂ ಹಳೆಯ ಆಚರಣೆಗಳು ಈಗಲೂ ಇದ್ದಾವೆ, ಅವೆಲ್ಲವನ್ನೂ ನೆನಪಿಸುವ ಕೆಲಸ ಈಗಿನ ಕಾಲದ ವಿದ್ಯಾರ್ಥಿಗಳಿಗೆ ಮಾಡುವುದು ಅವಶ್ಯಕತೆಯಿದೆ.

ಗುಣಮಟ್ಟದ ಶಿಕ್ಷಣವು ಅವಶ್ಯಕ ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ಅವಶ್ಯಕತೆ ಇದೆ, ಇಂದಿನ ದಿನಮಾನದಲ್ಲಿ ಹಣಕ್ಕಾಗಿ ಶಿಕ್ಷಣ ಸಂಸ್ಥೆಗಳು ಆಗಬಾರದು ವಿದ್ಯಾರ್ಥಿಗಳ ಉಜ್ವಲ ಭವಿಷ್ಯ ರೂಪಿಸುವ ಗುಣ ಇಟ್ಟುಕೊಂಡು ಶಿಕ್ಷಣ ಸಂಸ್ಥೆಗಳು ಆರಂಭವಾದರೆ, ಅಂತ ಶಿಕ್ಷಣ ಸಂಸ್ಥೆಗಳು ಬೆಳೆಯಲು ಸಾಧ್ಯವಾಗುತ್ತದೆ,

ವಿಜಯ ಪಬ್ಲಿಕ್ ಶಾಲೆಯನ್ನು ಸಮಾನ ಮನಸ್ಕರ ಗೆಳೆಯರು ಕಟ್ಟಿರುವುದು ಒಂದು ಸಂತೋಷಕರ ವಿಷಯವಾಗಿದೆ. ಇತ್ತೀಚಿಗೆ ವಿದ್ಯಾರ್ಥಿಗಳು ಫಲಿತಾಂಶ ಜೊತೆಗೆ ಕ್ರೀಡೆಗಳಲ್ಲೂ ಸಹ ಉತ್ತಮ ಸಾಧನೆ ಮಾಡುತ್ತಿರುವುದು ಒಂದು ಶ್ಲಾಘನೀಯ ಕೆಲಸ ಎಂದರು.

ಆದಿತ್ಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಸುರೇಶರೆಡ್ಡಿ ಮಾತನಾಡಿ, ವಿಜಯ್ ಪಬ್ಲಿಕ್ ಶಾಲೆಯ ಆಡಳಿತ ಮಂಡಳಿಯವರಲ್ಲಿ ತಂದೆ, ತಾಯಿಯ ಗುಣ ಇದೆ, ಅನೇಕ ಮಕ್ಕಳನ್ನು ತಂದೆ ತಾಯಿತರ ಮಕ್ಕಳನ್ನು ಪ್ರೀತಿ ಮಾಡುವ ಗುಣ ಈ ಶಾಲೆಯಲ್ಲಿ ಕಾಣುತ್ತಿದೆ, ಮೌಲ್ಯಗಳನ್ನು ಬೆಳೆಸುವ ಗುಣ ಪ್ರತಿಯೊಬ್ಬರಲ್ಲಿ ಬರಬೇಕು ಆಗ ಮಾತ್ರ ಇಂತಹ ಸಂಸ್ಥೆಗಳಿಗೆ ಹೆಸರು ಬರಲು ಸಾಧ್ಯ ಎಂದರು.

ನಿವೃತ್ತಿ ಶಿಕ್ಷಕರ ಬೀರಪ್ಪ ಶಂಭೂಜಿ ಮಾತನಾಡಿ, ರೈತರ ದಿನಾಚರಣೆಯ ಪ್ರಯುಕ್ತ ಹಳ್ಳಿಯ ಸಂಸ್ಕೃತಿ ಉಳಿಸುವ ಕೆಲಸ ಶಾಲೆಯಲ್ಲಿ ಆಗಿದೆ, ಶಾಲೆ ಆವರಣದಲ್ಲಿ ತರಕಾರಿ ಮಾಡುವುದು, ಭಾವಿಕಟ್ಟೆ, ಇನ್ನಿತರ ಅನೇಕ ವೈಶಿಷ್ಟತೆಯ ಪ್ರದರ್ಶನಗಳು ಏರ್ಪಡಿಸುವುದು ಒಂದು ಸಂಸ್ಕೃತಿಗೆ ಈ ಶಾಲೆ ಮುಖ್ಯವಾಗಿದೆ ಎಂದರು.

**ಎತ್ತಿನ ಬಂಡಿಯಲ್ಲಿ ಮಕ್ಕಳ ಮೆರವಣಿಗೆ:** ಮುಖ್ಯ ರಸ್ತೆಗಳಲ್ಲಿ ಎತ್ತಿನ ಬಂಡಿಯ ಮೂಲಕ ಶಾಲಾ ವಿದ್ಯಾರ್ಥಿಗಳನ್ನು ಕೂಡಿಸಿಕೊಂಡು ಮೆರವಣಿಗೆ ನಡೆಸಿದರು. ಇದೇ ವೇಳೆ ಡೊಳ್ಳು ಕುಣಿತ ಶಾಲೆಯ ವಿದ್ಯಾರ್ಥಿಗಳು ಅನೇಕ ರೀತಿಯಲ್ಲಿ ವೇಷ ಧಾರೆ ಧರಿಸಿರುವುದು ನೋಡುಗರ ಗಮನ ಸೆಳೆಯಿತು.

ಈ ಸಂದರ್ಭದಲ್ಲಿ: ಸಂಸ್ಥೆಯ ಮುಖ್ಯಸ್ಥರು ಹಾಗೂ ಮುಖ್ಯಗುರುಗಳಾದ ಹನುಮೇಶ ಗುಡುದೂರು, ಉಪನ್ಯಾಸಕ ಚಾಂದ್ ಪಾಷಾ, ನಿರುಪಾದಿ ಅರಳಹಳ್ಳಿ, ಶಿಕ್ಷಕಿಯರಾದ ಶಾರದಾ, ನಾಜಿಯ್, ಅನುಪ್ರಿಯಾ, ಶಾಹಿನಿ, ಸೇರಿದಂತೆ ಸಿಬ್ಬಂದಿಗಳು, ವಿದ್ಯಾರ್ಥಿಗಳು ಇದ್ದರು.

# ಬಿಜೆಪಿ ಕಾರ್ಯಕರ್ತೆ ಆತ್ಮಹತ್ಯೆ: ಮಲ್ಲಿನಾಥ ಬಿರಾದಾರ ಬಂಧನ

**ಕಲಬುರಗಿ,ಡಿ.23–**ಇತ್ತೀಚೆಗೆ ನಡೆದ ಬಿಜೆಪಿ ಕಾರ್ಯಕರ್ತೆ ಜ್ಯೋತಿ ಪಾಟೀಲ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಕಾರ್ಯಕರ್ತ ಮಲ್ಲಿನಾಥ ಬಿರಾದಾರನನ್ನು ಫರಹತಾಬಾದ ಪೊಲೀಸರು ಬಂಧಿಸಿದ್ದಾರೆ.

ಬಿಜೆಪಿ ಕಾರ್ಯಕರ್ತ ಮಲ್ಲಿನಾಥ ಬಿರಾದಾರ ಅವರ ನಂದಿಕೂರ ಗ್ರಾಮದಲ್ಲಿರುವ ಮನೆಯ ಆವರಣದಲ್ಲಿ ಬಿಜೆಪಿ ಕಾರ್ಯಕರ್ತೆ ಜ್ಯೋತಿ ಪಾಟೀಲ ಅವರು ಮೈಮೇಲೆ ಪೆಟ್ರೋಲ್ ಸುರಿದುಕೊಂಡು ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದರು. ಹಣಕಾಸಿನ ವಿಷಯವೇ ಆತ್ಮಹತ್ಯೆಗೆ ಕಾರಣವೆನ್ನಲಾಗಿತ್ತು.

ಈ ಸಂಬಂಧ ಫರಹತಾಬಾದ ಪೊಲೀಸ್ ಠಾಣೆಯಲ್ಲಿ ಮಲ್ಲಿನಾಥ ಬಿರಾದಾರ ವಿರುದ್ಧ ಪ್ರಕರಣ ದಾಖಲಾಗಿತ್ತು. ಇದೀಗ ಫರಹತಾಬಾದ ಪೊಲೀಸರು ಮಲ್ಲಿನಾಥ ಬಿರಾದಾರ ಅವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H